# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 32 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ : 07–08–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 | Issue - 32 | Title- Code: KARKAN 28269 | Chitradurga | Date : 07-08-2023 Monday | Page: 4 | Price: Rs. 2-00



ಒಳ ಪುಟದ ಸುದ್ದಿಗಳು

2 ಗೃಹ ಜ್ಯೋತಿ ಯೋಜನೆಗೆ ಚಾಲನೆ – ಸಚಿವ ಡಿ.ಸುಧಾಕರ್

3 ಕೆರೆಗಳನ್ನು ತುಂಬಿಸುವ ಕಾರ್ಯಕ್ಕೆ ಆದ್ಯತೆ : ಎ. ನಾರಾಯಣಸ್ವಾಮಿ

4 ಸಚಿವ ದಿನೇಶ್ ಗುಂಡೂರಾವ್ ಭೇಟಿ ಮೃತರ ಕುಟುಂಬದರಿಗೆ ಸಾಂತ್ವನ


# ಭರಮಸಾಗರ ಉಪ ಅಂಚೆ ಕಚೇರಿ ನೂತನ ಕಟ್ಟಡ ಲೋಕಾರ್ಪಣೆ

## ನರೇಗಾದಡಿ ಕಟ್ಟಡ ನಿರ್ಮಾಣಕ್ಕೆ ಅನುದಾನ : ಕೇಂದ್ರ ಸಚಿವ ಎ.ನಾರಾಯಣಸ್ವಾಮಿ



**ಚಿತ್ರದುರ್ಗ** : ಪ್ರಸ್ತುತ ಸಮಯದಲ್ಲೂ ಗ್ರಾಮೀಣ ಭಾಗದಲ್ಲಿ ಪೋಸ್ಟ್ ಮಾಸ್ಟರ್ ಮನೆಗಳಲ್ಲಿ ಅಂಚೆ ಕಚೇರಿಗಳ ನಿರ್ವಹಣೆ ಮಾಡುತ್ತಿರುವುದು ಆಶ್ಚರ್ಯ ಎನಿಸುತ್ತದೆ. ಈ ರೀತಿ ಆಗಬಾರದು. ಗ್ರಾಮೀಣ ಭಾಗದಲ್ಲಿ ನರೇಗಾದ ಅಡಿ ಅಂಚೆ ಕಚೇರಿ ಕಟ್ಟಡ ನಿರ್ಮಿಸಲು ಅವಕಾಶ ಇದ್ದರೇ, ಖಂಡಿತವಾಗಿ, ಆದ್ಯತೆ ಮೇರೆಗೆ ಅನುದಾನ ಮೀಸಲಿರಿಸಿ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ.ನಾರಾಯಣಸ್ವಾಮಿ ಭರವಸೆ ನೀಡಿದರು.

ಭಾನುವಾರ ಚಿತ್ರದುರ್ಗ ತಾಲ್ಲೂಕಿನ ಭರಮಸಾಗರದಲ್ಲಿ ಭಾರತೀಯ ಅಂಚೆ ಇಲಾಖೆ ವತಿಯಿಂದ ನೂತನವಾಗಿ ನಿರ್ಮಿಸಲಾಗಿರುವ ಭರಮಸಾಗರ ಉಪ ಅಂಚೆ ಕಚೇ–ರಿಯ ನೂತನ ಕಟ್ಟಡ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಮೊಬೈಲ್, ತಂತ್ರಜ್ಞಾನ ಬೆಳೆದಂತೆ ಅಂಚೆ ಕಚೇರಿಗಳ ಕೆಲಸದಲ್ಲೂ ಹಲವಾರು ಬದಲಾವಣೆಗಳು ಉಂಟಾದವು. ಡಿಬಿಟಿ, ಡಿಜಿಟಲ್ ಪೇಮೆಂಟ್ ಶುರು ಆದ ಮೇಲೆ ಅಂಚೆ ಕಚೇರಿಗಳ ಅಸ್ತಿತ್ವಕ್ಕೆ ಕುಂದು ಒದಗಿತ್ತು. ಆದ–ರೆ ದೇಶದ ಪ್ರಧಾನಿಗಳಾದ ನರೇಂದ್ರ ಮೋದಿಯವರು ಅಂಚೆ ಕಚೇರಿ ಮುಚ್ಚಲು ಅವಕಾಶ ನೀಡದೆ, ಸರ್ಕಾರದ ಹಲವು ಯೋಜನೆ ಹಾಗೂ ಗ್ರಾಮೀಣ ಜನರಿಗೆ ಜೀವಾವಿಮಾ ಸೌಲಭ್ಯಗಳನ್ನು ಜಾರಿಮಾಡಲು ಅಂಚೆ ಕಚೇರಿಗಳಿಗೆ ಅವಕಾಶ ಕಲ್ಪಿಸಿದರು. ಇಂದು ಬ್ಯಾಂಕ್‌ಗಳೊಂದಿಗೆ ಪೈಪೋಟಿ ಮೇಲೆ ಅಂಚೇ ಕಚೇರಿಗಳು ಡಿಜಿಟಲ್ ಪೇಮೆಂಟ್ ಸಹ ಮಾಡುತ್ತಿವೆ. ಸರ್ಕಾರದ ಫಲಾನುಭವಿಗಳ ನೇರ ನಗದು ವರ್ಗಾವಣೆ ಸೇವೆಯನ್ನು ಸಹ ಅಂಚೆ ಕಚೇರಿಯಲ್ಲಿ ನೀಡಲಾಗಿದೆ. ನೇರ ನಗದು ವರ್ಗಾವಣೆ ಜಾರಿ ಮೂಲಕ ಯಾವುದೇ ಭ್ರಷ್ಟಾಚಾರಕ್ಕೆ ಅವಕಾಶ ನೀಡದೇ ಫಲಾನುಭವಿಗಳಿಗೆ ನೇರವಾಗಿ ಸರ್ಕಾರದ ಯೋಜನೆ ತಲುಪಿಸಲಾಗುತ್ತಿದೆ ಎಂದರು.

ಸರ್ಕಾರದ ಯೋಜನೆಗಳ ಮೇಲೆ ಅವಲಂಬಿತರಾದವರ ಮನೆ ಬಾಗಿಲಿಗೆ ಅಂಚೆ ಕಚೇರಿಗಳು ಸೇವೆಗಳನ್ನು ತಲುಪಿಸುತ್ತವೆ. ಅಂಚೆ ಇಲಾಖೆಯಲ್ಲಿ ಅನುಕಂಪ ಆಧಾರಿತ ನೌಕರಿಯನ್ನು ಕುಟುಂಬದ ಅವಲಂಬಿತರಾದವರಿಗೆ ನೀಡಲು ಶೇ.5 ರಷ್ಟರ ನಿಯಮ ತೊಡಕಾಗಿದೆ. ಅಂ–ಚೇ ಕಚೇರಿಯಲ್ಲಿ ಸೇವೆ ಸಲ್ಲಿಸಿ ಮೃತರಾದ ಬಹಳಷ್ಟು ನೌಕರರ ಕುಟುಂಬದವರು ಅನುಕಂಪ ಆಧಾರಿತ ನೌಕರಿ ಕೊಡಿಸುವಂತೆ ಮನವಿ ಮಾಡುತ್ತಾರೆ. ಇದನ್ನು ಗಮನದಲ್ಲಿ ಇರಿಸಿಕೊಂಡು ಕೇಂದ್ರ ಸರ್ಕಾರದಲ್ಲಿ ಚರ್ಚಿಸಿ, ಈಗಿರುವ ಶೇ.5 ನಿಯಮಕ್ಕೆ ತಿದ್ದುಪಡಿ ತರಲಾಗುವುದು ಎಂದರು.

ಅಂಚೇ ಕಚೇರಿ ಕಟ್ಟಡ ನಿರ್ಮಾಣಕ್ಕೆ ಭೂಮಿ : ಜಿಲ್ಲೆಯ ಭೀಮಸಮುದ್ರ, ಚಿಕ್ಕಜಾಜೂರು, ಮೊಳಕಾಲ್ಮೂರು ಹಾಗೂ ಪರುಶುರಾಂಪುರದಲ್ಲಿ ಅಂಚೆ ಕಚೇರಿ ಕಟ್ಟಡ ನಿರ್ಮಾಣಕ್ಕೆ ಸೂಕ್ತ ಭೂಮಿ ಮಂಜೂರು ಮಾಡಲಾಗುವುದು ಎಂದು ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಹೇಳಿದರು.

ಬಹುವರ್ಷಗಳ ಹಿಂದೆ ಅಂಚೇ ಕಚೇರಿಗಳು ಗ್ರಾಮೀಣ ಜನರ ಜೀವನದಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದವು. ಟೆಲಿಗ್ರಾಮ್ ಸಂದೇಶಕ್ಕೆ ಗ್ರಾಮದ ಬಹಳಷ್ಟು ಜನರು ಕಾತರದಿಂದ ಕಾಯುತ್ತಿದ್ದ ಕ್ಷಣ ಇತ್ತು. ಅಂಚೆಯಣ್ಣನ ಪತ್ರಕ್ಕಾಗಿ ಎದುರು ನೋಡುತ್ತಿದ್ದರು. ಜನರ ನೋವು ನಲಿವುಗಳಲ್ಲಿ ಅಂಚೇ ಕಚೇರಿ ಪ್ರಮುಖ ಪಾತ್ರ ವಹಿಸುತ್ತಿತ್ತು. ನಾನು ಕೂಡ ಬಾಲ್ಯದಲ್ಲಿ ಅಂಚೇ ಕಚೇ–ರಿಯ ಟೆಲಿಗ್ರಾಮ್ ಯಂತ್ರದ ಟಿಕ್ ಟಿಕ್ ಶಬ್ದದ ಎಡಗೆ ಕುತೂಹಲದಿಂದ ನೋಡಿತ್ತಿದ್ದೆ. ಪೋಸ್ಟ್ ಮಾಸ್ಟರ್ ಆ ಸಂದೇಶವನ್ನು ಡಿಕೋಡ್ ಮಾಡಿ ತಿಳಿಸುತ್ತಿದ್ದರು ಎಂದು ಕೇಂದ್ರ ಸಚಿವ ನಾರಾಯಣಸ್ವಾಮಿ ತಮ್ಮ ಬಾಲ್ಯದ ನೆನಪುಗಳಿಗೆ ಜಾರಿದರು.

ಕರ್ನಾಟಕ ವೃತ್ತದ ಚೀಫ್ ಪೋಸ್ಟ್ ಮಾಸ್ಟರ್ ಜನರಲ್ ಎಸ್.ರಾಜೇಂದ್ರ ಕುಮಾರ್ ಮಾತನಾಡಿ, ಅಂಚೆ ಕಚೇರಿಯು ಗ್ರಾಮೀಣ ಭಾಗದಲ್ಲಿ ಉಳಿತಾಯ ಹಾಗೂ ವಿಮೆ ಸೌಲಭ್ಯ ನೀಡುತ್ತಿದೆ. ಅಂಚೆ ಕಚೇರಿಯ ಉಳಿತಾಯ ಖಾತೆಗಳು ಬ್ಯಾಂಕ್ ಖಾತೆಗಳೊಂದಿಗೆ ಸಮ್ಮಿಳತಗೊಳ್ಳಲಿದ್ದು, ಬ್ಯಾಂಕ್ ಖಾತೆಗಳಂತೆ, ಅಂಚೆ ಖಾತೆಗಳ ಮೂಲಕ ಹಣಕಾಸು ವ್ಯವಹಾರ ನೆಡಸಬಹುದು. ಸರ್ಕಾರದ ಯೋಜನೆಗಳ ಫನಾಲುಭವಿಗಳಿಗೆ ಅಂಚೆ ಖಾತೆಗಳಿಗೆ ನೇರವಾಗಿ ನಗದು ವರ್ಗಾವಣೆ ಮಾಡಬಹುದಾಗಿದೆ. ಡಿಜಿಟಲ್ ಪಾವತಿಯು ಸಹ ಅಂಚೆ ಖಾತೆ ಮೂಲಕ ಸಾಧ್ಯವಾಗಲಿದೆ. ಅಂಚೆ ಕಚೇರಿಗಳಲ್ಲಿ ಆಧಾರ್ ಸೇವೆಗಳು ಹಾಗೂ ಪಾಸ್ ಪೋರ್ಟ್ ಸೇವಾ ಕೇಂದ್ರಗಳನ್ನು ತರೆದು ನಾಗರಿಕರಿಗೆ ಸೇವೆ ನೀಡಲಾಗುತ್ತಿದೆ ಎಂದರು.

ಚಿತ್ರದುರ್ಗ ವಿಭಾಗ ಅಂಚೆ ಅಧೀಕ್ಷಕ ಓ.ವಿರೂಪಾಕ್ಷಪ್ಪ ಪ್ರಸ್ತಾವಿಕವಾಗಿ ಮಾತನಾಡಿ, ಭರಮಸಾಗರ ಅಂಚೆ ಕಚೇರಿ 1964 ರಲ್ಲಿ ಪ್ರಾರಂಭವಾಯಿತು. ನಂತರ ಈ ಹಲವು ಏಳು ಬೀಳುಗಳ ನಡುವೆ ಉಪ ಅಂಚೆ ಕಚೇ–ರಿಯಾಗಿ ಮೇಲ್ದರ್ಜೆಗೆ ಏರಿದೆ. ಜಿಲ್ಲೆಯಲ್ಲಿ 36 ಪ್ರಮುಖ ಅಂಚೆ ಕಚೇರಿ, 317 ಉಪ ಅಂಚೇ ಕಚೇರಿ, 274 ಗ್ರಾಮೀಣ ಅಂಚೆ ಕಚೇರಿಗಳಿವೆ. ಗ್ರಾಮೀಣದ ಶೇ.70 ರಷ್ಟು ಅಂಚೇ ಕಚೇರಿಗಳು ಬಾಡಿಗೆ ಕಟ್ಟಡ ಅಥವಾ ಪೋಸ್ಟ್ ಮಾಸ್ಟರ್ ಮನೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿವೆ. ನರೇಗಾ ಅಡಿ ಅಂಚೇ ಕಚೇರಿ ಕಟ್ಟಡ ನಿರ್ಮಾಣಕ್ಕೆ ಅವಕಾಶವಿದೆ. ಜಿಲ್ಲೆಯ 89 ಅಂಚೆ ಕಚೇರಿಯನ್ನು ಗ್ರಾ.ಪಂ. ಕಚೇರಿಯಲ್ಲಿ ಕಾರ್ಯನಿರ್ವಹಿಸಲು ಅವಕಾಶ ಮಾಡಿಕೊಡಬೇಕು ಎಂದು ಕೇಂದ್ರ ಸಚಿವರಲ್ಲಿ ಮನವಿ ಮಾಡಿದರು. ಇದರಿಂದ ಜನರಿಗೆ ತ್ವರಿತಗತಿಯಲ್ಲಿ ಅಂ–ಚೇ ಸೇವೆಗಳನ್ನು ಒದಗಿಸಲು ಅವಕಾಶ ಲಭಿಸಲಿದೆ. ಚಿತ್ರದುರ್ಗ ಅಂಚೆ ಉಪ ವಿಭಾಗ ಪ್ರಸಕ್ತ ಸಾಲಿನಲ್ಲಿ 12.55 ಕೋಟಿ ವರಮಾನ ಗಳಿಸಿದೆ. ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಅಂಚೆ ಪಿ.ಐ.ಎಲ್ ನಲ್ಲಿ ಉತ್ತಮ ಸಾಧನೆ ಮಾಡಲಾಗಿದೆ ಎಂದರು.

ಗ್ರಾ.ಪಂ ಅಧ್ಯಕ್ಷೆ ಮಂಜುಳ ಕೊಗುಂಡೆ ಕರಿಬಸಪ್ಪ, ಮಾಜಿ ಜಿ.ಪಂ.ಸದಸ್ಯ ಗ್ರಾಮದ ಮುಖಂಡ ಡಿ.ವಿ.ಶರಣಪ್ಪ ಸೇರಿದಂತೆ ಮತ್ತಿತರು ವೇದಿಕೆಯಲ್ಲಿ ಇದ್ದರು. ನೂತನ ಉಪ ಅಂಚೆ ಕಚೇರಿ ಕಟ್ಟಡದ ಆವರಣದಲ್ಲಿ ಸಸಿಗಳನ್ನು ನೆಟ್ಟು ನೀರು ಎರೆಯಲಾಯಿತು.

---

## ಫಾಸ್ಟ್ ನ್ಯೂಸ್

### ಶಾಸಕ ಚಂದ್ರಪ್ಪ ಹೆಸರನ್ನು ಡೆತ್ ನೋಟ್‌ನಲ್ಲಿ ಬರೆದು ಸರ್ಕಾರಿ ನೌಕರ ಆತ್ಮಹತ್ಯೆ..



**ಚಿತ್ರದುರ್ಗ** : ಹೊಳಲ್ಕೆರೆ ಶಾಸಕ ಎಂ. ಚಂದ್ರಪ್ಪ ಕೆಲಸದಿಂದ ಅಮಾನತ್ತು ಮಾಡುವ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿ ಗ್ರಾಮ ಪಂಚಾಯಿತಿ ದ್ವಿತೀಯ ದರ್ಜೆ ಸಹಾಯಕರೊಬ್ಬರು ಆತ್ಮಹತ್ಯೆಗೆ ಶರಣಾಗಿದ್ದಾರೆ.

ಹೊಳಲ್ಕೆರೆ ತಾಲೂಕಿನ ಉಪ್ಪರಿಗೇನಹಳ್ಳಿ ಗ್ರಾಮ ಪಂಚಾಯಿತಿ ದ್ವಿತೀಯ ದರ್ಜೆ ಸಹಾಯಕ ತಿಪ್ಪೇಸ್ವಾಮಿ ನಿನ್ನೆ ರಾತ್ರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹೊಸದುರ್ಗದ ಜಾನಕಲ್ಲಿನ ತನ್ನ ಮಗಳ ಮನೆಯ ಬಳಿ ವಿಷ ಸೇವಿಸಿ ಸಾವಿಗೀಡಾಗಿದ್ದಾರೆ.

ಹೊಳಲ್ಕೆರೆ ಶಾಸಕ ಎಂ. ಚಂದ್ರಪ್ಪ ನನ್ನನ್ನು ಅಮಾನತ್ತು ಮಾಡುವ ಬೆದರಿಕೆ ಹಾಕಿದ್ದರು' ಎಂದು ಡೆತ್ ನೋಟ್‌ನಲ್ಲಿ ಉಲ್ಲೇಖಿಸಿರುವ ತಿಪ್ಪೇಸ್ವಾಮಿ, ನನ್ನ ಸಾವಿಗೆ ಶಾಸಕ ಎಂ. ಚಂದ್ರಪ್ಪ ನೇರ ಕಾರಣ. ಗ್ರಾಮ ಪಂಚಾಯತಿಯಲ್ಲಿ ಕೆಲವರು ನನಗೆ ಕಿರುಕುಳ ನೀಡುತ್ತಿದ್ದರು. ಎಂದು ಉಲ್ಲೇಖಿಸಿದ್ದಾರೆ. ಶಾಸಕರು ಮತ್ತು ತನ್ನ ಸಹೋದ್ಯೋಗಿಗಳ ಕಿರುಕುಳವೇ ತಿಪ್ಪೇಸ್ವಾಮಿ ಆತ್ಮಹತ್ಯೆಗೆ ಕಾರಣ ಎನ್ನಲಾಗಿದ್ದು, ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

---

## ಬಿಜೆಪಿ ಜತೆ ಹೋಗುವ ದಾರಿದ್ರ್ಯ ಬಂದಿಲ್ಲ : ಹೆಚ್ಡಿಕೆ



**ಬೆಂಗಳೂರು** : ಬಿಜೆಪಿ ಜತೆ ಹೋಗುವ ಸಚಿವ ಸುನಿಲ್ ಕುಮಾರ್ 'ಕನ್ನಡಪ್ರಭ'ಕ್ಕೆ ದಾರಿದ್ರ್ಯ ನಮಗೆ ಬಂದಿಲ್ಲ. ಸರ್ಕಾರದ ಮುಖಾಮುಖಿಯಲ್ಲಿ ನೀಡಿದ ಹೇಳಿಕೆಗೆ ವಿರುದ್ಧ ಹೋರಾಟ ಮಾಡುವಾಗ ಬಿಜೆಪಿ ಜತೆ ಕೈಜೋಡಿಸಿದ್ದೇನೆ ಎಂದ ಮಾತ್ರಕ್ಕೆ ಅವರಿಗೆ ಅಡಿ ಯಾಳಾಗಲು ಹ ' ೋ ೀ ಗ ಿ ದ ್ ದ ೀ ನ ' ಎಂದರ್ಥವಲ್ಲ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ತಿರುಗೇಟು ನೀಡಿದ್ದಾರೆ.

ಜೆಡಿಎಸ್ ಜತೆ ಹೋಗುವ ದಾರಿದ್ರ್ಯ ಬಂದಿಲ್ಲ ಎಂದು ಮಾಜಿ ಪ್ರತಿಕ್ರಿಯೆ ನೀಡಿದ ಅವರು, ಸದನದಲ್ಲಿ ಸರ್ಕಾರದ ವಿರುದ್ಧ ಹೋರಾಟ ಮಾಡುತ್ತಿದ್ದೇನೆ. ಅಲ್ಲಿ ಬಿಜೆಪಿ ಅಧಿಕೃತ ವಿರೋಧ ಪಕ್ಷ. ಕೆಲವೊಮ್ಮೆ ಅವರ ಜತೆ ಸೇರಿ ಹೋರಾಟ ಮಾಡ ಬೇಕಾಗುತ್ತದೆ. ಹಾಗೆಂದ ಮಾತ್ರಕ್ಕೆ ಯಾರ ಬಳಿಯಲ್ಲೂ ಭಿಕ್ಷೆ ಬೇಡುವ ಪರಿಸ್ಥಿತಿ ಇಲ್ಲ.

2ನೇ ಪುಟಕ್ಕೆ




ಡಾನ್ ಬೋಸ್ಕೊ ಕನ್ನಡ ಮಾಧ್ಯಮ ಶಾಲಾ ವತಿಯಿಂದ ಚಿತ್ರ ಡಾನ್ ಬೋಸ್ಕೋ ದಲ್ಲಿ ಇಂದು ವನಮಹೋತ್ಸವ ಜರುಗಿತು 300ಕ್ಕೂ ಹೆಚ್ಚು ಸಸಿಗಳನ್ನು ಆ ಶಾಲಾ ವಿದ್ಯಾರ್ಥಿಗಳಿಂದ ನಡೆಸಲಾಯಿತು. ಈ ಕಾರ್ಯಕ್ರಮದಲ್ಲಿ ಗೌರವಾನ್ವಿತ ಫಾದರ್ ಸಜಿ ಜಾರ್ಜ್ ಅವರು, ಶಿಕ್ಷಕರಾದ ಸುಧಾ,ಸಂಧ್ಯಾ, ಚಂದನ,ರೇಖಾ, ಲಿಲ್ಲಿ ಅನಿತಾ ಶಿವಕುಮಾರ್, ಸತೀಶ್ ಹಾಗೂ ಇತರರು ಭಾಗವಹಿಸಿದ್ದರು.

---

## ಗೃಹ ಜ್ಯೋತಿ ಯೋಜನೆಗೆ ಚಾಲನೆ – ಡಿ.ಸುಧಾಕರ್



**ಚಿತ್ರದುರ್ಗ** : ಸರ್ಕಾರದ ಪಂಚ ಗ್ಯಾ–ರೆಂಟಿ ಯೋಜನೆಗಳಲ್ಲಿ ಗೃಹಜ್ಯೋತಿ ಯೋಜನೆಯು ಒಂದಾಗಿದೆ. ಯೋಜನೆ ಜಾರಿ ಮಾಡಿರುವುದು ಹೆಮ್ಮೆ ಎನಿಸಿದೆ. ಗೃಹ ಜ್ಯೋತಿ ಯೋಜನೆ ಜಾರಿಯಿಂದ ಗ್ರಾಹಕರ ಮೇಲಿನ ಆರ್ಥಿಕ ಹೊರೆ ತಪ್ಪಿದೆ ಎಂದು ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ನಗರ ಗಾಯಿತ್ರಿ ಕಲ್ಯಾಣ ಮಂಟಪದಲ್ಲಿ ಶನಿವಾರ ಇಂಧನ ಇಲಾಖೆ ಹಾಗೂ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ವತಿಯಿಂದ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಸರ್ಕಾರದ ಮಹತ್ವಾಕಾಂಕ್ಷೆಯ ಗ್ಯಾರೆಂಟಿ ಯೋಜನೆ ಗೃಹ ಜ್ಯೋತಿ ಯೋಜನೆಗೆ ಜಿಲ್ಲಾ ಮಟ್ಟದಲ್ಲಿ ಚಾಲನೆ ನೀಡಿ ಅವರು ಮಾತನಾಡಿದರು.

ಪಕ್ಷದ ಪ್ರಣಾಳಿಕೆಯಲ್ಲಿ ಹೇಳಿದಂತೆ ಯೋಜನೆ ಜಾರಿ ಮಾಡಿದ್ದೇವೆ. ಇಲ್ಲಿಯವರೆಗೆ ಮೂರು ಯೋಜನೆಗಳು ಜಾರಿಯಾಗಿವೆ. ಜಿಲ್ಲೆಯಲ್ಲಿ ಪಡಿತರ ಚೀಟಿ ಹೊಂದಿರುವವರ ಪೈಕಿ, ಶೇ.87 ರಷ್ಟು ಬಿಪಿಎಲ್ ಕಾರ್ಡು ಹೊಂದಿದರುವವರು ಇದ್ದಾರೆ. ಇದರಲ್ಲಿ ಶೇ.99 ರಷ್ಟು ಜನರು ಗೃಹಜ್ಯೋತಿಗೆ ನೋಂದಣಿ ಮಾಡಿಕೊಂಡಿದ್ದಾರೆ. ಗೃಹ ಜ್ಯೋತಿ ಯೋಜನೆಗೆ ಸರ್ಕಾರ ಪ್ರತಿ ವರ್ಷ ರೂ.4000 ಕೋಟಿ ಖರ್ಚು ಮಾಡಲಿದೆ. ಜಿಲ್ಲೆಗೆ ಪ್ರತಿ ವರ್ಷ ರೂ. 300 ಕೋಟಿ ಖರ್ಚು ಬರಲಿದೆ. ಇದರಿಂದ ಗ್ರಾಹಕರ ಮೇಲಿನ ಹೊರೆ ತಪ್ಪಲಿದೆ. ಮುಂದಿನ ತಿಂಗಳು 4ನೇ ಯೋಜನೆ ಗೃಹಲಕ್ಷ್ಮೀ ಯೋಜನೆಗೆ ಬೆಳಗಾವಿಯಲ್ಲಿ ಚಾಲನೆ ನೀಡಲಾಗುವುದು ಎಂದರು.

2ನೇ ಪುಟಕ್ಕೆ

**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

## ಫಾಸ್ಟ್ ನ್ಯೂಸ್

### ಬಿಜೆಪಿ ಜತೆ ಹೋಗುವ ದಾರಿದ್ರ್ಯ ಬಂದಿಲ್ಲ : ಹೆಚ್ಡಿಕೆ

ಮೊದಲ ಪುಟದಿಂದ.. ನಾನು ಯಾರ ಮನೆಯ ಬಾಗಿಲಿಗೂ ಹೋಗಲ್ಲ. ನಮ್ಮ ರಾಜ್ಯಕ್ಕೆ ಕಾಂಗ್ರೆಸ್ ಎಷ್ಟುದ್ರೋಹ ಮಾಡಿದೆಯೋ ಅಷ್ಟೇ ದ್ರೋಹವನ್ನು ಬಿಜೆಪಿ ಸಹ ಮಾಡಿದೆ ಎಂದು ಟೀಕಾಪ್ರಹಾರ ನಡೆಸಿದರು.

2008ರಿಂದಲೂ ನಡೆಯುತ್ತಿರುವ ನನ್ನ ಹೋರಾಟ ನಿರಂತರವಾಗಿ ಮುಂದುವರೆಯುತ್ತದೆ. ಎರಡು ರಾಷ್ಟ್ರೀಯ ಪಕ್ಷಗಳು ಜೆಡಿಎಸ್ ಅನ್ನು ತಮ್ಮ ಅನುಕೂಲಕ್ಕೆ ತಕ್ಕಂತೆ ದುರ್ಬಳಕೆ ಮಾಡಿಕೊಂಡಿವೆ. ಆದರೆ, ನಾವು ಏಕಾಂಗಿಯಾಗಿ ಹೋರಾಟ ಮಾಡುವ ಶಕ್ತಿಯನ್ನು ಉಳಿಸಿಕೊಂಡಿದ್ದೇವೆ. ರಾಜ್ಯದ ದುಸ್ಥಿತಿಗೆ ಬಿಜೆಪಿ ಮತ್ತು ಕಾಂಗ್ರೆಸ್‌ನದ್ದು ಸಮಪಾಲು ಇದೆ ಎಂದು ಕಿಡಿಕಾರಿದರು.

### ವಿಡಿಯೋ ಕಾನ್ಫರೆನ್ಸ್ ಮೂಲಕ ಶಂಕುಸ್ಥಾಪನೆ

**ದಾವಣಗೆರೆ :** ಅಮೃತ ಭಾರತ ರೈಲ್ವೆ ನಿಲ್ದಾಣಗಳ ಪುನರ್ ನಿರ್ಮಾಣ ಯೋಜನೆಯಡಿ ಮೈಸೂರು ವಿಭಾಗದ ಹರಿಹರ ರೈಲು ನಿಲ್ದಾಣವನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಈ ಯೋಜನೆಯಡಿ ದೇಶದಲ್ಲಿನ 508 ರೈಲ್ವೆ ನಿಲ್ದಾಣಗಳನ್ನು ಪುನರ್ ನಿರ್ಮಾಣ ಮಾಡುವ ಕಾಮಗಾರಿಗೆ ಏಕಕಾಲದಲ್ಲಿ ಮಾನ್ಯ ಪ್ರಧಾನಿಯವರಾದ ನರೇಂದ್ರ ಮೋದಿಯವರು ಆಗಸ್ಟ್ 6 ರ ಬೆಳಗ್ಗೆ 9.15 ರಿಂದ ವೀಡಿಯೋ ಕಾನ್ಫರೆನ್ಸ್ ಮೂಲಕ ಶಂಕುಸ್ಥಾಪನೆ ನೆರವೇರಿಸುವರು.

ಹರಿಹರದ ರೈಲ್ವೆ ನಿಲ್ದಾಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಸಂಸದರಾದ ಡಾ; ಜಿ.ಎಂ.ಸಿದ್ದೇಶ್ವರ ಹಾಗೂ ಹರಿಹರ ವಿಧಾನಸಭಾ ಕ್ಷೇತ್ರದ ಬಿ.ಪಿ.ಹರೀಶ್ ರವರು ಉಪಸ್ಥಿತರಿರುವರು ಹಾಗೂ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಉಪಸ್ಥಿತರಿರುವರು.

### ರಾಷ್ಟ್ರಧ್ವಜ ವಂದನಾ ಕಾರ್ಯಗಾರ

**ದಾವಣಗೆರೆ :** ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ-ಯ ಪೊಲೀಸ್ ಉಪಾಧೀಕ್ಷಕರ ಕಚೇರಿ ಆವರಣದಲ್ಲಿ ಆಗಸ್ಟ್ 11 ರಂದು ಬೆಳಿಗ್ಗೆ 11 ಗಂಟೆಗೆ ರಾಷ್ಟ್ರಧ್ವಜ ವಂದನಾ ಕಾರ್ಯಗಾರವನ್ನು ಏರ್ಪಡಿಸಲಾಗಿದೆ.

ರಾಷ್ಟ್ರೀಯ ಹಬ್ಬಗಳಲ್ಲಿ ವಿವಿಧ ಕಚೇರಿಗಳಲ್ಲಿ ರಾಷ್ಟ್ರಧ್ವಜ ಕಟ್ಟುವ, ಇಳಿಸುವ ಕಾರ್ಯನಿರ್ವಹಿಸುವ ಗ್ರೂಪ್ ಡಿ ಹಾಗೂ ಮೇಲ್ವಿಚಾರಣೆ ನಡೆಸುವ ಸಿಬ್ಬಂದಿಗಳಿಗೆ ಜಿಲ್ಲಾ ಸಂಘಟಕರು, ಭಾರತ ಸೇವಾದಳ ಹಾಗೂ ಪೊಲೀಸ್ ಉಪಾಧೀಕ್ಷಕರು, ಜಿಲ್ಲಾ ಸಶಸ್ತ್ರ ಮೀಸಲು ಪಡೆ, ದಾವಣಗೆರೆ ಇವರ ಮುಖಾಂತರ ಕಾರ್ಯಗಾರವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ .ಎಂ.ವಿ ತಿಳಿಸಿದ್ದಾರೆ.

### ಮಿಷನ್ ಇಂದ್ರಧನುಷ 5.0 ಅಭಿಯಾನ

**ದಾವಣಗೆರೆ :** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಜಿಲ್ಲೆಯಾದ್ಯಂತ ಪರಿಣಾಮಕಾರಿ ಮಿಷನ್ ಇಂದ್ರಧನುಷ್ 5.0 ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅಭಿಯಾನವು ಮೂರು ಹಂತಗಳಲ್ಲಿ. ನಡೆಯಲಿದ್ದು, ಮೊದಲ ಹಂತ ಆಗಸ್ಟ್ 7 ರಿಂದ 12 ರವರೆಗೆ, ಎರಡನೇ ಹಂತ ಸೆಪ್ಟೆಂಬರ್ 11 ರಿಂದ 16 ರವರೆಗೆ ಮತ್ತು ಮೂರನೇ ಹಂತ ಅಕ್ಟೋಬರ್ 19 ರಿಂದ 14 ರವರೆಗೆ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ದಿನಗಳನ್ನು ಒಳಗೊಂಡಂತೆ ನಿರ್ದಿಷ್ಟ ಆರು ದಿನಗಳಂದು ನಡೆಯುತ್ತದೆ.

ಆದ್ದರಿಂದ ಜಿಲ್ಲೆಯ 5 ವರ್ಷದೊಳಗಿನ ಶೂನ್ಯ-ಡೋಸ್ ಮಕ್ಕಳು ಮತ್ತು ರಾಷ್ಟ್ರೀಯ ಪ್ರತಿರಕ್ಷಣಾ ಪರೀಕ್ಷೆಯಲ್ಲಿ ಯಾವುದೇ ಲಸಿಕೆ ಹಾಕಿಸಿಕೊಳ್ಳದೆ ಇರುವ ಗರ್ಭಿಣಿ ಸ್ತ್ರೀಯರು ಲಸಿಕಾಕರಣದಲ್ಲಿ ಪಾಲ್ಗೊಳ್ಳಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್.ಬಿ. ಇಟ್ನಾಳ್ ತಿಳಿಸಿದ್ದಾರೆ.

### ನೇಮಕಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ :** ಅಲೆಮಾರಿ, ಅರೆ ಅಲೆಮಾರಿ ಜನಾಂಗದವರಿಗೆ ಸೌಲಭ್ಯ ಹಾಗೂ ಮೀಸಲಾತಿ ಕಲ್ಪಿಸುವಲ್ಲಿ ಜಿಲ್ಲಾ ಮಟ್ಟದ ಜಿಲ್ಲಾಧಿಕಾರಿಗಳಿಂದ ನಾಮ ನಿರ್ದೇಶಕ ಸದಸ್ಯರನ್ನು ನೇಮಕ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಮಾನದಂಡಗಳು ಹಾಗೂ ಸದಸ್ಯರ ಅರ್ಹತೆ ಮತ್ತು ಜವಾಬ್ದಾರಿಗಳು: ನಾಮ ನಿರ್ದೇಶನ ಬಯಸುವ ವ್ಯಕ್ತಿಯು ದಾವಣಗೆರೆ ಜಿಲ್ಲೆಯವರಾಗಿದ್ದು, 15 ವರ್ಷ ಜಿಲ್ಲೆಯಲ್ಲಿ ವಾಸವಾಗಿರಬೇಕು ಮತ್ತು ಅಲೆಮಾರಿ ಅರೆ ಅಲೆಮಾರಿ ಸಮುದಾಯಕ್ಕೆ ಸೇರಿದವರಾಗಿರಬೇಕು, ಕನಿಷ್ಠ 35 ರಿಂದ 65 ವರ್ಷಗಳಾಗಿರಬೇಕು. ಎಸ್.ಎಸ್.ಎಲ್.ಸಿ ಪೂರೈಸಿರಬೇಕು, ತಮ್ಮ ಜನಾಂಗದ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸ್ಥಿತಿಗತಿ, ವಾಸಿಸುವ ಸ್ಥಳ, ಕೈಗೊಳ್ಳುತ್ತಿರುವ ಉದ್ಯೋಗದ ಬಗ್ಗೆ ಅಂಕಿ ಅಂಶಗಳ ಮಾಹಿತಿ ತಿಳಿದಿರಬೇಕು, ಅಲೆಮಾರಿ ಅರೆ ಅಲೆಮಾರಿ ಜನಾಂಗಕ್ಕೆ ಸಂಬಂಧಿಸಿದಂತೆ ಜನಾಂಗಕ್ಕೆ ಇರುವ ಮೀಸಲಾತಿ ಸೌಲಭ್ಯ ಹಾಗೂ ಕಲ್ಯಾಣ ಕಾರ್ಯಕ್ರಮಗಳ ಮಾಹಿತಿ ಹೊಂದಿರತಕ್ಕದ್ದು, ಯಾವುದೇ ರೀತಿಯ ಕ್ರಿಮಿನಲ್ ಮೊಕದ್ದಮೆಗಳು ಹಾಗೂ ದಂಡ, ಜುಲ್ಮನೆ, ಶಿಕ್ಷೆಗೆ ಒಳಗಾಗಿರಬಾರದು, ಸಮಿತಿಗಳಿಗೆ ನೇಮಿಸುವ ವ್ಯಕ್ತಿಯು ಸಮಾಜದಲ್ಲಿ ಗೌರವಾನ್ವಿತೆ ಹೊಂದಿ, ಮಾನಸಿಕವಾಗಿ ಸ್ವಾಸ್ಥ್ಯವಾಗಿರಬೇಕು.

ಅರ್ಜಿಯನ್ನು ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ 46, 2ನೇ ಮಹಡಿ, ಜಿಲ್ಲಾಡಳಿತ ಭವನ ಕರೂರ ರಸ್ತೆ ದಾವಣಗೆರೆ ಇಲ್ಲಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಲಿಖಿತ ಮನವಿಯನ್ನು ಆಗಸ್ಟ್ 21 ರ ಒಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08192-262973 ಗೆ ಸಂಪರ್ಕಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಗಾಯತ್ರಿ ಕೆ.ಹೆಚ್ ತಿಳಿಸಿದ್ದಾರೆ.

# ಗೃಹ ಜ್ಯೋತಿ ಯೋಜನೆಗೆ ಚಾಲನೆ - ಸಚಿವ ಡಿ.ಸುಧಾಕರ್



ಮೊದಲ ಪುಟದಿಂದ.. ಜಿಲ್ಲೆಯಲ್ಲಿ 4.7 ಲಕ್ಷ ಗೃಹ ವಿದ್ಯುತ್ ಬಳಕೆದಾರರು ಇದ್ದು, ಇದರಲ್ಲಿ 3.37 ಲಕ್ಷ ಬಳಕೆದಾರರು ಗೃಹಜ್ಯೋತಿ ಯೋಜನೆಗೆ ನೊಂದಾಯಿಸಿಕೊಂಡಿದ್ದಾರೆ. ಜುಲೈ 1 ರಿಂದ ಯೋಜನೆಯ ಲಾಭ ಬಳಕೆದಾರರಿಗೆ ದೊರೆಯಲಿದೆ. ಪ್ರತಿ ಮನೆಯ 200 ಯುನಿಟ್ ಗೃಹ ವಿದ್ಯುತ್ ಬಳಕೆಗೆ ಶೂನ್ಯ ಬಿಲ್ ನೀಡಲಾಗುವುದು. ಜಿಲ್ಲೆಯ 4.7 ಲಕ್ಷ ಬಳಕೆದಾರಿಗೆ, ಪ್ರತಿ ತಿಂಗಳು ರೂ.22.27 ಕೋಟಿ ವಿದ್ಯುತ್ ಬಿಲ್ ಬರಲಿದ್ದು, ಇದನ್ನು ಸರ್ಕಾರದಿಂದ ಬೆಸ್ಕಾಂಗೆ ಪಾವತಿಸಲಾಗುತ್ತಿದೆ. ಜಿಲ್ಲೆಯಲ್ಲಿ ಗುಣಮಟ್ಟದ ವಿದ್ಯುತ್ ಸರಬಾರಜು ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದರು.

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಮಾತನಾಡಿ, 2023ರ ಚುನಾವಣೆಯಲ್ಲಿ ನೀಡಿದ ಭರವಸೆಯಂತೆ ಗೃಹ ಜ್ಯೋತಿ ಯೋಜನೆ ಜಾರಿ ಮಾಡಲಾಗಿದೆ. ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣದಿಂದ ಯೋಜನೆ ಜಾರಿಗೆ ಪ್ರಯತ್ನಿಸಲಾಗುತ್ತಿದೆ. ಶಕ್ತಿ ಯೋಜನೆಯಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ, ಅನ್ನಭಾಗ್ಯ ಯೋಜನೆಯಡಿ 10 ಕೆ.ಜಿ ಅಕ್ಕಿ, ಗೃಹಜ್ಯೋತಿ ಅಡಿ 200 ಯೂನಿಟ್ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಆಗಸ್ಟ್ 18 ರಂದು ಗೃಹಲಕ್ಷ್ಮೀ ಯೋಜನೆಗೆ ಬೆಳಗಾವಿಯಲ್ಲಿ ಜಾರಿ ಮಾಡಲಾಗುವುದು ಎಂದರು.

ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಕಳೆದ ತಿಂಗಳು ಜಾರಿಗೊಳಿಸಿದ ಶಕ್ತಿ ಯೋಜನೆಯಲ್ಲಿ ರಾಜ್ಯದ 1 ಕೋಟಿ ಮಹಿಳೆಯರು ಉಚಿತವಾಗಿ ಬಸ್‌ಗಳಲ್ಲಿ ಓಡಾಟ ಮಾಡಿದ್ದಾರೆ. ಸರ್ಕಾರದ ಯೋಜನೆಗಳ ಬಗ್ಗೆ ಧರ್ಮಸ್ಥಳ ಧರ್ಮಾಧಿಕಾರಿ ವೀರೇಂದ್ರ ಹೆಗಡೆ ಅವರು ಮೆಚ್ಚುಗೆ ವ್ಯಕ್ತಪಡಿಸಿ ಪತ್ರ ಸಹ ಬರೆದಿದ್ದಾರೆ. ಬಡವರಿಗಾಗಿ ಯೋಜನೆಗಳ ಜಾರಿ ಮಾಡಲಿದೆ. ಅನ್ನಭಾಗ್ಯ ಯೋಜನೆಯಡಿ ಅಕ್ಕಿ ನೀಡದ ಕಾರಣ ಫಲಾನುಭವಿಗಳ ಖಾತೆ ಹಣ ಜಮೆ ಮಾಡಲಾಗಿದೆ. ಆಂಧ್ರ, ತೆಲಂಗಾಣ ರಾಜ್ಯದಿಂದ ಅಕ್ಕಿ ಖರೀದಿ ಮಾಡಿ ಫಲಾನುಭವಿಗಳಿಗೆ ನೀಡಲಾಗುವುದು. ಗೃಹಜ್ಯೋತಿ ಯೋಜನೆಯ ಪ್ರಗತಿಯನ್ನು ತಾಲೂಕುವಾರು ಪರಿಶೀಲಿಸಿ, ಯೋಜನೆಯ ಲಾಭವನ್ನು ಎಲ್ಲರಿಗೂ ನೀಡಲಾಗುವುದು. ಮುಂದಿನ ದಿನಗಳಲ್ಲಿ ಯುವನಿಧಿ ಯೋಜನೆಯನ್ನೂ ಸಹ ಜಾರಿಗೆ ಮಾಡಲಾಗುವುದು ಎಂದರು.

ಚಿತ್ರದುರ್ಗ ಶಾಸಕ ಕೆ.ಸಿ.ವಿರೇಂದ್ರ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ, ಗೃಹ ಜ್ಯೋತಿ ಯೋಜನೆ ಚಾಲನೆ ಕುರಿತು ರಾಜ್ಯದ ಜನತೆಗೆ ಮಾಧ್ಯಮಗಳು ತಲುಪಿಸಿ, ಪ್ರತಿಯೊಬ್ಬರು ನೊಂದಣಿ ಮಾಡಿಕೊಳ್ಳುವಂತೆ ಪ್ರೇರೇಪಿಸಬೇಕು. ಚಿತ್ರದುರ್ಗ ತಾಲೂಕಿನ 95 ಸಾವಿರ ಗೃಹ ವಿದ್ಯುತ್ ಬಳಕೆದಾರರು ಇದ್ದಾರೆ. ಗೃಹ ಜ್ಯೋತಿ ನೊಂದಣಿಯಲ್ಲಿ ಜಿಲ್ಲೆಯಲ್ಲಿ ಚಿತ್ರದುರ್ಗ ತಾಲೂಕು ಮೂಂಚೂಣಿಯಲ್ಲಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಮಾತನಾಡಿ, ಸರ್ಕಾರದ ಐದು ಗ್ಯಾರೆಂಟಿ ಯೋಜನೆಗಳನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಮಾಡಲಾಗುತ್ತಿದೆ. ಈ ಯೋಜನೆಗಳಿಂದ ಜನರ ಜೀವನದಲ್ಲಿ ಮಹತ್ವದ ಬದಲಾವಣೆಯಾಗಲಿದೆ. ಸಾರ್ವಜನಿಕರು ಈ ಯೋಜನೆಗಳಿಗೆ ಹೆಚ್ಚು ಹೆಚ್ಚು ನೋಂದಣಿ ಮಾಡಿಕೊಳ್ಳುವಂತೆ ಕೋರಿದರು. ಶಕ್ತಿ ಯೋಜನೆ ಮಹಿಳಾ ಸಬಲೀಕರಣಕ್ಕೆ ಸಹಾಯವಾಗಿದೆ. ಗೃಹಲಕ್ಷ್ಮೀ ಯೋಜನೆಯಡಿ ಶೇ.80 ರಷ್ಟು ನೋಂದಣಿಯಾಗಿದೆ. ಗೃಹ ಜ್ಯೋತಿ ಯೋಜನೆಯಡಿ ಜಿಲ್ಲೆಯ ಬಾಕಿ ಇರುವ 39 ಸಾವಿರ ಜನರು ನೋಂದಣಿ ಮಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಸಾಂಕೇತಿಕವಾಗಿ 5 ಜನ ಫಲಾನುಭವಿಗಳಿವಗೆ ಶೂನ್ಯ ವಿದ್ಯುತ್ ಬಿಲ್ಲ್ ವಿತರಿಸಲಾಯಿತು. ಬೆಸ್ಕಾಂನ ದಾವಣಗೆರೆ ವಲಯದ ಅಧೀಕ್ಷಕ ಇಂಜಿನಿಯರಿಂಗ್ ಜಗದೀಶ್ ಸ್ವಾಗತಿಸಿದರು. ಚಿತ್ರದುರ್ಗ ಜಿಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ ಜಯಣ್ಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಬೆಸ್ಕಾಂ ಕಾರ್ಯಪಾಲಕ ಇಂಜಿನಿಯರ್ ರಾಮಚಂದ್ರ ವಂದಿಸಿದರು.

# ಮೆಡಿಕಲ್ ಕಾಲೇಜುಗೆ ಡಿಎಂಎಫ್ ನಿಧಿಯಡಿ ಅನುದಾನ ಭರಿಸಿ - ಎ. ನಾರಾಯಣಸ್ವಾಮಿ

**ಚಿತ್ರದುರ್ಗ :** ಪ್ರಸಕ್ತ ವರ್ಷದಿಂದಲೇ ಚಿತ್ರದುರ್ಗದಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜು ಪ್ರಾರಂಭಿಸಬೇಕು, ಜಿ.ಆರ್. ಹಳ್ಳಿಯಲ್ಲಿನ ಸ್ನಾತಕೋತ್ತರ ಕೇಂದ್ರದಲ್ಲಿನ ಕಟ್ಟಡವನ್ನು ಹಸ್ತಾಂತರಿಸಿಕೊಂಡು, ಅಗತ್ಯ ಮೂಲಭೂತ ಸೌಕರ್ಯ ಕಾಮಗಾರಿ ಪ್ರಾರಂಭಿಸಬೇಕು, ಡಿಎಂಎಫ್ ನಿಧಿಯಡಿ ಅನುದಾನ ಭರಿಸುವಂತೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅವರು ಅಧಿಕಾರಿಗಳಿಗೆ ದಿಶಾ ಸಮಿತಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು ಸೂಚನೆ ನೀಡಿದರು.

ಸರ್ಕಾರಿ ಮೆಡಿಕಲ್ ಕಾಲೇಜು ಪ್ರಗತಿ ಬಗ್ಗೆ ಮಾಹಿತಿ ನೀಡಿದ ವಿಶೇಷಾಧಿಕಾರಿ ಡಾ. ಯುವರಾಜ್ ಅವರು, ಪ್ರಸಕ್ತ ವರ್ಷದಿಂದಲೇ ವೈದ್ಯಕೀಯ ವ್ಯಾಸಂಗಕ್ಕಾಗಿ ವಿದ್ಯಾರ್ಥಿಗಳ ಪ್ರವೇಶಾತಿ ಪ್ರಾರಂಭವಾಗುತ್ತಿದೆ, ತಾತ್ಕಾಲಿಕವಾಗಿ ಜಿ.ಆರ್. ಹಳ್ಳಿಯಲ್ಲಿನ ದಾವಣಗೆರೆ ವಿವಿ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಆವರಣದಲ್ಲಿನ ಕಟ್ಟಡದಲ್ಲಿ ಪ್ರಾರಂಭಿಸಲಾಗುತ್ತಿದ್ದು, ಅಲ್ಲದೆ ಸರ್ಕಾರಿದಿಂದ ಅಗತ್ಯ ಅನುದಾನ ಬಿಡುಗಡೆಯೂ ಆಗಬೇಕಿದೆ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಕೇಂದ್ರ ಸಚಿವರು, ಇದುವರೆಗೂ ಕಟ್ಟಡವನ್ನು ಹಸ್ತಾಂತರ ಮಾಡಿಕೊಳ್ಳದೇ ಇರುವ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಅಗತ್ಯ ಅನುದಾನವನ್ನು ಡಿಎಂಎಫ್ ನಿಧಿಯಡಿ ಬಿಡುಗಡೆ ಮಾಡುವಂತೆ ಈಗಾಗಲೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ, ಈ ನಿಟ್ಟಿನಲ್ಲಿ ವಿಶೇಷಾಧಿಕಾರಿಗಳು ವಿಳಂಬ ಮಾಡದೆ, ಎಲ್ಲ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದರು.

**ನೀರು ಸಂಗ್ರಹಗಾರಗಳ ಸ್ವಚ್ಛತೆ ರಿಜಿಸ್ಟರ್ ನಿರ್ವಹಿಸಿ :** ಕವಾಡಿಗರ ಹಟ್ಟಿಯಲ್ಲಿ ಜರುಗಿದ ಕಲುಷಿತ ನೀರು ಪೂರೈಕೆ ಪ್ರಕರಣವನ್ನು ಗಮನಿಸಿದಾಗ, ಕೆಳಹಂತದ ಸಿಬ್ಬಂದಿಗಳು, ಉನ್ನತ ಅಧಿಕಾರಿಗಳು ಜನಪ್ರತಿನಿಧಿಗಳು ಎಲ್ಲರೂ ಇದ-ಕ್ಕೆ ಜವಾಬ್ದಾರರಾಗುತ್ತಾರೆ. ಇಂತಹ ಅನಾಹುತಗಳು ಸಂಭವಿಸಿದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸಿದ ಸಿಬ್ಬಂದಿ, ಪರಿಶೀಲಿಸಿದ ಅಧಿಕಾರಿಗಳು ಈ ರಿಜಿಸ್ಟರ್‌ಗೆ ಸಹಿ ಮಾಡಿ ಖಚಿತಪಡಿಸುವಂತಾಗಬೇಕು.

**ಜಲಜೀವನ ಮಿಷನ್ ಕಾಮಗಾರಿ ಪರಿಶೀಲನೆ :** ಜಿಲ್ಲೆಯಲ್ಲಿ ಮನೆ ಮನೆಗೆ ಶುದ್ಧ ನೀರು ಪೂರೈಸುವ ಜಲಜೀವನ್ ಮಿಷನ್ ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳು ಸಮರ್ಪಕವಾಗಿ ನಡೆಯುತ್ತಿಲ್ಲ, ಗುಣಮಟ್ಟದ ಪೈಪ್‌ಗಳನ್ನು ಬಳಸುತ್ತಿಲ್ಲ ಎಂಬುದಾಗಿ ದೂರುಗಳು ಕೇಳಿಬಂದಿವೆ. ಹೀಗಾಗಿ ಜಿಲ್ಲೆಯಲ್ಲಿ ಜಲಜೀವನ್ ಮಿಷನ್ ಯೋಜನೆ ಕಾಮಗಾರಿಗೆ ಸಂಬಂಧಿಸಿದಂತೆ ಸಮಗ್ರ ಪರಿಶೀಲನೆ ನಡೆಸಿ, ಫೋಟೋ ಸಹಿತ ವರದಿಯನ್ನು ಸಲ್ಲಿಸುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಅಸಮಾಧಾನ, ಸಭೆ ಮುಂದೂಡಿಕೆ :** ದಿಶಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ನಿರ್ಮಿತಿ ಕೇಂದ್ರ, ಲೀಡ್ ಬ್ಯಾಂಕ್ ವ್ಯವಸ್ಥಾಪಕರು, ಬೆಸ್ಕಾಂ, ಕೆಪಿಟಿಸಿಎಲ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸೇರಿದಂತೆ ಕೆಲವು ಇಲಾಖೆ ಅಧಿಕಾರಿಗಳು ನೀಡಿದ ಅಪೂರ್ಣ ವರದಿ ಬಗ್ಗೆ ತೀವ್ರ ಬೇಸರ ವ್ಯಕ್ತಪಡಿಸಿದರು., ಹೀಗಾದರೆ ನಾವು ಜನಪ್ರತಿನಿಧಿಗಳು ನಮಗೆ ಮತ ಹಾಕಿದವರ ಋಣ ತೀರಿಸಲು ಆದೀತೆ?, ಎಂಬುದಾಗಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಕೇಂದ್ರ ಸಚಿವರು, ದಿಶಾ ಪ್ರಗತಿ ಪರಿಶೀಲನಾ ಸಭೆಯನ್ನು ಇನ್ನೊಂದು ದಿನ ನಡೆಸುತ್ತೇನೆ, ಆಗಲಾದರೂ ಸರಿಯಾದ ಮಾಹಿತಿ ಹಾಗೂ ವರದಿಯೊಂದಿಗೆ ಬನ್ನಿ ಎಂದು ಸೂಚಿಸಿ, ದಿನಾಂಕ ನಿಗದಿಪಡಿಸುವಂತೆ ಸೂಚಿಸಿ, ಸಭೆಯಿಂದ ಹೊರ ನಡೆದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ, ಜಿ.ಪಂ. ಉಪಕಾರ್ಯದರ್ಶಿ ತಿಮ್ಮಪ್ಪ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

## ಕರಾಮುವಿ ಶೈಕ್ಷಣಿಕ ಜಾಗೃತಿ ಪ್ರಚಾರ ಆಂದೋಲನಕ್ಕೆ ಚಾಲನೆ



**ಚಿತ್ರದುರ್ಗ :** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಜಿಲ್ಲೆಯಲ್ಲಿ ಕೈಗೊಂಡಿರುವ "ಕರಾಮುವಿ ಶೈಕ್ಷಣಿಕ ಜಾಗೃತಿ ಪ್ರಚಾರ ಆಂದೋಲನ ವಾಹನ"ಕ್ಕೆ ಡಾನ್ ಬೋಸ್ಕೋ ಪದವಿ ಕಾಲೇಜಿನ ಪ್ರಾಂಶುಪಾಲ ಡಾ. ಚೋಮನ್ ಕೆ.ಜೆ. ಶನಿವಾರದಂದು ಡಾನ್ ಬೋಸ್ಕೋ ಪದವಿ ಕಾಲೇಜು ಆವರಣದಲ್ಲಿ ಚಾಲನೆ ನೀಡಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು "ಕರಾಮುವಿ ಶೈಕ್ಷಣಿಕ ಜಾಗೃತಿ ಪ್ರಚಾರ ಆಂದೋಲನ ವಾಹನ" ಮೂಲಕ ಎಲ್ಲ ಜಿಲ್ಲೆಗಳಲ್ಲೂ ಎಲ್‌ಇಡಿ ಪರದೆಯುಳ್ಳ ಪ್ರಚಾರ ಆಂದೋಲನ ವಾಹನ ಮೂಲಕ ಮುಕ್ತ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಕಾರ್ಯಕ್ರಮಗಳು, ಕೋರ್ಸ್‌ಗಳು, ಅಧ್ಯಯನ ವಿಷಯಗಳು, ಶುಲ್ಕ ರಿಯಾಯಿತಿ, ಉಚಿತ ಪ್ರವೇಶಾತಿ ಬಗ್ಗೆ ಹಾಗೂ ಇನ್ನಿತರ ಶೈಕ್ಷಣಿಕ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಉನ್ನತ ಶಿಕ್ಷಣದಿಂದ ವಂಚಿತರಾದ ಸಮಾಜದ ವಿವಿಧ ವರ್ಗದ ಜನರಿಗೆ ವಿದ್ಯಾಭ್ಯಾಸ ಮುಂದುವರೆಸಲು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ನೀಡುತ್ತಿರುವ ಸುವರ್ಣಾವಕಾಶವನ್ನು ಜಿಲ್ಲೆಯ ಜನ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕರಾಮುವಿ ಯಿಂದ ದೊರೆಯುತ್ತಿರುವ ಉನ್ನತ ಶಿಕ್ಷಣದ ಅವಕಾಶಗಳ ಬಗ್ಗೆ ಡಾನ್ ಬೋಸ್ಕೋ ವಿದ್ಯಾ ಸಂಸ್ಥೆಯ ಮುಖ್ಯಸ್ಥ ಫಾದರ್ ಸಜ್ಜಿ ಜಾರ್ಜ್ ಅವರು ವಿವರಿಸಿದರು.

ಕರಾಮುವಿ ಚಿತ್ರದುರ್ಗ ಜಿಲ್ಲೆಯ ಪ್ರಾದೇಶಿಕ ಕೇಂದ್ರದ ನಿರ್ದೇಶಕರಾದ ರಾಧಿಕಾ ಬಿ.ಆರ್. ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಡಾ.ಕೆ.ಟಿ. ತಿಪ್ಪೇಸ್ವಾಮಿ ಜಿಲ್ಲಾ ಆಸ್ಪತ್ರೆಗೆ ಭೇಟಿ



**ಚಿತ್ರದುರ್ಗ :** ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ. ತಿಪ್ಪೇಸ್ವಾಮಿ ಶನಿವಾರ, ಜಿಲ್ಲಾ ಹಾಗೂ ಬಸವೇಶ್ವರ ಆಸ್ಪತ್ರೆಗೆ ಭೇಟಿ ನೀಡಿ, ನಗರದ ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಅಸ್ವಸ್ಥಗೊಂಡು ಚಿಕಿತ್ಸೆ ಪಡೆಯುತ್ತಿರುವ ಮಕ್ಕಳ ಆರೋಗ್ಯವನ್ನು ವಿಚಾರಿಸಿ, ಪೋಷಕರಿಗೆ ಸಾಂತ್ವನ ಹೇಳಿದರು.

ಜಿಲ್ಲಾ ಆಸ್ಪತ್ರೆಯ ಮಕ್ಕಳ ವಾರ್ಡ್‌ನಲ್ಲಿ ಸ್ವಚ್ಛತೆ ಇಲ್ಲದಿರುವುದು, ಬೆಡ್‌ಗಳ ಕೊರತೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಎನ್‌ಆರ್ಸಿ ಹಾಗೂ ಎಸ್‌ಎನ್‌ಸಿಯು ವಾರ್ಡ್, ನವಜಾತ ಶಿಶು ವಾರ್ಡ್‌ಗಳಿಗೆ ಭೇಟಿ ನೀಡಿ, ಮಕ್ಕಳಿಗೆ ನೀಡುತ್ತಿರುವ ಚಿಕಿತ್ಸೆಗಳ ಬಗ್ಗೆ ವೈದ್ಯಕೀಯ ಸಿಬ್ಬಂದಿಯಿಂದ ಮಾಹಿತಿ ಪಡೆದರು.

ಜಿಲ್ಲಾ ಆಸ್ಪತ್ರೆಯಲ್ಲಿ ಸಭೆ ನಡೆಸಿ ಕವಾಡಿಗರ ಹಟ್ಟಿ ಪ್ರಕರಣವು ಗಂಭೀರ ಸ್ವರೂಪಕ್ಕೆ ತಲುಪುವ ಮೊದಲೇ ಎಚ್ಚೆತ್ತುಕೊಳ್ಳಬೇಕಿತ್ತು. ಇಂತಹ ಸಂದರ್ಭದಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ಕೆಲಸ ಮಾಡಬೇಕು ಯಾರು ಕೂಡ ಬೇಜಾಬ್ದಾರಿ ತೋರಬಾರದು ಎಂದರು.

ಮಕ್ಕಳ ವಾರ್ಡ್‌ಗಳನ್ನು ಸ್ವಚ್ಚತೆಯಿಂದ ಕಾಪಾಡಿಕೊಳ್ಳುವಂತೆ ಆಸ್ಪತ್ರೆಯ ಸಿಬ್ಬಂದಿಗಳಿಗೆ ತಾಕೀತು ಮಾಡಿದ ಅವರು, ಕವಾಡಿಗರಹಟ್ಟಿಯ ಮಕ್ಕಳ ಸ್ಥಿತಿಗತಿ ಬಗ್ಗೆ ಸಮೀಕ್ಷೆ ಮಾಡಿ ಈ ತಿಂಗಳ ಕೊನೆಯ ದಿನಾಂಕದೊಳಗೆ ವರದಿ ಸಲ್ಲಿಸಬೇಕು ಎಂದರು

ಈ ಸಂದರ್ಭದಲ್ಲಿ ಮಕ್ಕಳ ವಿಶೇಷ ತಜ್ಞರಾದ ದೇವರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪವಿತ್ರ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಸಿ.ಸವಿತಾ, ಮಹಿಳಾ ಪೊಲೀಸ್ ಠಾಣೆ ಎಎಸ್‌ಐ ಅನಿತಾ, ಗ್ರಾಮಾಂತರ ಪೊಲೀಸ್ ಠಾಣೆಯ ಪಿಎಸ್‌ಐ ಡಿ.ಶಿವಕುಮಾರ್, ಕಾನೂನು ಹಾಗೂ ಪರಿವೀಕ್ಷಣಾ ಅಧಿಕಾರಿ ಮಂಜುಳಾ ಸೇರಿದಂತೆ ಜಿಲ್ಲಾಸ್ಪತ್ರೆ ಸಿಬ್ಬಂದಿ ಇದ್ದರು.

## ಫಾಸ್ಟ್ ನ್ಯೂಸ್

### ಇ-ಕಾರ್ಮಿಕ ತಂತ್ರಾಂಶದಲ್ಲಿ ನೋಂದಣಿ ಕಡ್ಡಾಯ

**ಚಿತ್ರದುರ್ಗ** : ಚಿತ್ರದುರ್ಗ ಜಿಲ್ಲೆಯಲ್ಲಿ ಬರುವ ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ 1961 ಹಾಗೂ ನಿಯಮಾವಳಿ 1963 ರ ಕಲಂ 4(1) ಮತ್ತು (3) ಹಾಗೂ ನಿಯಮ 3ರ ಮೇರೆಗೆ ನೋಂದಣಿ ಮಾಡಿಸುವುದು ಕಡ್ಡಾಯವಾಗಿದೆ.

ಈಗಾಗಲೇ ನೋಂದಣಿ ಮಾಡಿಸಿಕೊಂಡ ಸಂಸ್ಥೆಗಳನ್ನು ಹೊರತುಪಡಿಸಿ ಉಳಿದ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರು ಹಾಗೂ ಉದ್ದಿಮೆದಾರರು ತಮ್ಮ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳನ್ನು ಚಿತ್ರದುರ್ಗ ಜಿಲ್ಲೆಯ ಆಯಾ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರ ಕಛೇರಿಗಳಲ್ಲಿ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ. ಆದ್ದರಿಂದ ತಾಲ್ಲೂಕಿನಲ್ಲಿ ಬರುವ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ನೊಂದಣಿಗಾಗಿ 15 ದಿನಗಳ ಒಳಗಾಗಿ ರಾಜ್ಯ ಸರ್ಕಾರದ ಇ-ಕಾರ್ಮಿಕ ತಂತ್ರಾಂಶದಲ್ಲಿ ಅವಶ್ಯಕ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಿ, ನೋಂದಣಿ ಪತ್ರ ಪಡೆದುಕೊಳ್ಳಲು ಜಿಲ್ಲೆಯ ಎಲ್ಲಾ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಮಾಲೀಕರಿಗೆ ಈ ಮೂಲಕ ತಿಳಿಸಲಾಗಿದೆ.

ಕಾರ್ಮಿಕ ನಿರೀಕ್ಷಕರು ಮತ್ತು ಇಲಾಖಾ ಅಧಿಕಾರಿಗಳು ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ತಪಾಸಣೆ ವೇಳೆಯಲ್ಲಿ ಮಳಿಗೆಗಳಲ್ಲಿ ನೊಂದಣಿ ಪತ್ರ ಪಡೆಯದೆ ಹಾಗೂ ನೊಂದಣಿ ಪತ್ರ ಪ್ರದರ್ಶಿಸದೆ ಇದ್ದ ಪಕ್ಷದಲ್ಲಿ ಉಲ್ಲಂಘನೆಗಳು ಕಂಡುಬಂದಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ದ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಕಾರ್ಮಿಕ ಅಧಿಕಾರಿ ಸಿ.ಎನ್.ಯಶೋಧರ ತಿಳಿಸಿದ್ದಾರೆ.

### ಸಾಕ್ಷರಾತಾ ಪರೀಕ್ಷೆ

**ದಾವಣಗೆರೆ** : ಆಗಸ್ಟ್ 6 ರಂದು ಬೆಳಿಗ್ಗೆ 8.30 ರಿಂದ ಸಂಜೆ 5.30 ರವರೆಗೆ 6 ತಾಲ್ಲೂಕು ವ್ಯಾಪ್ತಿಯ 107 ಸರ್ಕಾರಿ ಪ್ರಾಥಮಿಕ ಪ್ರೌಢಶಾಲಾ ಪರೀಕ್ಷಾ ಕೇಂದ್ರಗಳಲ್ಲಿ ಸಾಕ್ಷರತಾ ಪರೀಕ್ಷೆಯನ್ನು ಆಯೋಜಿಸಲಾಗಿದೆ.

ಪ್ರಸಕ್ತ ಸಾಲಿನ ಸಾಕ್ಷರತಾ ಕಾರ್ಯಕ್ರಮದಡಿ 15 ವರ್ಷಕ್ಕಿಂತ ಮೇಲ್ಪಟ್ಟ ನೋಂದಣಿಯಾದ 15224 ಅನಕ್ಷರಸ್ಥ ಕಲಿಕಾರ್ಥಿಗಳಿಗೆ ಈಗಾಗಲೇ ಕಲಿಕಾ ಕಾರ್ಯ ಪೂರ್ಣಗೊಳಿಸಿದ್ದು, ಈ ಕಲಿಕಾರ್ಥಿಗಳಿಗೆ 3 ಅವಧಿಯಲ್ಲಿ ಪರೀಕ್ಷೆ ಜರುಗಲಿದೆ. ಪರೀ-ಕ್ಷೆಗೆ ನೋಂದಾಯಿಸಲ್ಪಟ್ಟ ವಯಸ್ಕ ಕಲಿಕಾರ್ಥಿಗಳು ತಮಗೆ ಅನುಕೂಲವಾದ ಸಮಯದಲ್ಲಿ ಎರಡು ತಾಸಿನ ಒಂದು ಅವಧಿಯಲ್ಲಿ ಪರೀಕ್ಷೆಗೆ ಹಾಜರಾಗಬಹುದು. ಈ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಪ್ರಮಾಣ ಪತ್ರ ನೀಡಲಾಗುವುದೆಂದು ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಹಾಗೂ ಜಿಲ್ಲಾ ಲೋಕ ಶಿಕ್ಷಣ ಸಮಿತಿಯ ಸದಸ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

### ಗೃಹಜೋತಿ ಯೋಜನೆಗೆ ಚಾಲನೆ

**ದಾವಣಗೆರೆ** : ದಾವಣಗೆರೆ ನಗರದ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಸಮುದಾಯ ಭವನದಲ್ಲಿ ಆಗಸ್ಟ್ 6 ರಂದು ಮಧ್ಯಾಹ್ನ 12 ಗಂಟೆಗೆ ರಾಜ್ಯ ಸರ್ಕಾರದ ಗೃಹಜೋತಿ ಯೋಜನೆಗೆ ಚಾಲನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್ ಮಲ್ಲಿಕಾರ್ಜುನ್ ಕಾರ್ಯಕ್ರಮದ ಉದ್ಘಾಟನೆ ಮತ್ತು ಅಧ್ಯಕ್ಷತೆ ವಹಿಸುವರು. ಇಂಧನ ಸಚಿವರಾದ ಕೆ.ಜೆ.ಜಾರ್ಜ್ ಘನ ಉಪಸ್ಥಿತರಿರುವರು.

ಮುಖ್ಯ ಅತಿಥಿಗಳಾಗಿ ಲೋಕಸಭಾ ಸದಸ್ಯ ಡಾ.ಜಿ.ಎಂ. ಸಿದ್ದೇಶ್ವರ, ವಿಧಾನಸಭಾ ಶಾಸಕರಾದ ಡಾ. ಶಾಮನೂರು ಶಿವಶಂಕರಪ್ಪ, ಮಾಯಕೊಂಡ ಶಾಸಕ ಕೆ.ಎಸ್‌ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ಹರಪನಹಳ್ಳಿ ಶಾಸಕರಾದ ಎಂ.ಪಿ. ಲತಾ ಮಲ್ಲಿಕಾರ್ಜುನ್, ಮಹಾನಗರ ಪಾಲಿಕೆ ಮೇಯರ್ ವಿನಾಯಕ ಬಿ.ಹೆಚ್, ವಿಧಾನ ಪರಿಷತ್ ಶಾಸಕರಾದ ಕೆ ಪಿ ನಂಜುಂಡಿ ವಿಶ್ವಕರ್ಮ, ರವಿಕುಮಾರ್ ಎನ್, ಡಾ. ತೇಜಸ್ವಿನಿ ಗೌಡ, ಎಸ್.ಎಲ್ ಭೋಜೇಗೌಡ, ವೈ.ಎ. ನಾರಾಯಣಸ್ವಾಮಿ, ಚಿದಾನಂದ್. ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್ ಉಪಸ್ಥಿತರಿರುವರು.

ವಿಶೇಷ ಆಹ್ವಾನಿತರಾಗಿ ಇಂಧನ ಇಲಾಖೆಯ ಸರ್ಕಾರದ ಅಪರ ಕಾರ್ಯದರ್ಶಿ ಗೌರವ್ ಗುಪ್ತ, ಕ.ವಿ.ನಿ.ನಿ ಹಾಗೂ ಕ.ವಿ.ಪ್ರ.ನಿ.ನಿ ಪ್ರಭಾರ ವ್ಯವಸ್ಥಾಪಕ ನಿರ್ದೇಶಕ ಪಂಕಜ್‌ಕುಮಾರ್ ಪಾಂಡೆ, ಬೆವಿಕಂ ವ್ಯವಸ್ಥಾಪಕ ನಿರ್ದೇಶಕ ಮಹಾಂತೇಶ್ ಬೀಳಗಿ, ಬೆವಿಕಂ, ಬೆಂಗಳೂರು ನಿರ್ದೇಶಕ ದರ್ಶನ್.ಜೆ ಮತ್ತು ತಾಂತ್ರಿಕ ನಿರ್ದೇಶಕ ರಮೇಶ್ ಎಚ್.ಜೆ,

ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ. ಅರುಣ್. ಕೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ಉಪಸ್ಥಿತರಿರುವರು.

### ನೇರ ಸಂದರ್ಶನ

**ದಾವಣಗೆರೆ** : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಮಾದರಿ ವೃತ್ತಿ ಕೇಂದ್ರದ ವತಿಯಿಂದ ಆಗಸ್ಟ್ 8 ರಂದು ಬೆಳಗ್ಗೆ 10 ಗಂ-ಟೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ(ಕೊಠಡಿ ಸಂಖ್ಯೆ-51) ದಲ್ಲಿ ನೇರ ಆಯ್ಕೆ ಸಂದರ್ಶನ ಆಯೋಜಿಸಲಾಗಿದೆ.

ಈ ಆಯ್ಕೆಯಲ್ಲಿ ಹಲವು ಖಾಸಗಿ ಕಂಪನಿಗಳು ಭಾಗವಹಿಸುತ್ತಿದ್ದು, ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮೊ, ಪದವಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು. ಆಸಕ್ತ ಅಭ್ಯರ್ಥಿಗಳು ನಿಗಧಿತ ಸ್ಥಳ ಮತ್ತು ಸಮಯಕ್ಕೆ ಕನಿಷ್ಠ 6 ಸೆಟ್ ಬಯೋಡಾಟಾ ಮತ್ತು ಆಧಾರ್ ಕಾರ್ಡ್‌ನೊಂದಿಗೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ. 6361550016, 08192-259446 ಸಂಪರ್ಕಿಸಲು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ. ಡಿ ತಿಳಿಸಿದ್ದಾರೆ.

# ಕೆರೆಗಳನ್ನು ತುಂಬಿಸುವ ಕಾರ್ಯಕ್ಕೆ ಆದ್ಯತೆ : ಎ. ನಾರಾಯಣಸ್ವಾಮಿ



**ಚಿತ್ರದುರ್ಗ** : ಭದ್ರಾ ಮೇಲ್ದಂಡೆ ಯೋಜನೆಯಡಿ ಕೆರೆಗಳನ್ನು ತುಂಬಿಸುವ ಕಾಮಗಾರಿಗಳಿಗೆ ಮೊದಲ ಆದ್ಯತೆ ನೀಡಿ, ನಂತರದಲ್ಲಿ ಹನಿ ನೀರಾವರಿ ಯೋಜನೆಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವಂತೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಮಿನಿ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಲಾದ ಭದ್ರಾ ಮೇಲ್ದಂಡೆ ಯೋಜನೆಯ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭದ್ರಾ ಮೇಲ್ದಂಡೆ ಯೋಜನೆಯಲ್ಲಿ ವಾಣಿ ವಿಲಾಸ ಸಾಗರ ಜಲಾಶಯಕ್ಕೆ 05 ಟಿ.ಎಂ.ಸಿ ನೀರು ಹರಿಸಲು ತೀರ್ಮಾನ ಆಗಿರುವಂತೆ, ರಾಜ್ಯ ಸಂಪುಟ ಸಭೆಯಲ್ಲಿ ತೀರ್ಮಾನಿಸಿ, ಚಿತ್ರದುರ್ಗ, ದಾವಣಗೆರೆ, ಚಿಕ್ಕಮಗಳೂರು ಹಾಗೂ ತುಮಕೂರು ಜಿಲ್ಲೆಗಳ ವ್ಯಾಪ್ತಿಯಲ್ಲಿನ 367 ಕೆರೆಗಳನ್ನು ಆದ್ಯತೆ ಆಧಾರದ ಮೇಲೆ ಕೆರೆಗಳನ್ನು ತುಂಬಿಸುವುದಕ್ಕೆ ಕ್ರಮ ಕೈಗೊಳ್ಳಬೇಕು. ಕೆರೆಗಳು ತುಂಬಿದರೆ ಹೆಚ್ಚಿನ ಜನರಿಗೆ ಅನುಕೂಲವಾಗುತ್ತದೆ, ಹನಿ ನೀರಾವರಿಗೆ ನಂತರದ ಆದ್ಯತೆ ನೀಡಲಿ. ಹೀಗಾಗಿ 367 ಕೆರೆಗಳಿಗೆ ನೀರು ತುಂಬಿಸಿದ ನಂತರವೇ ಸರ್ಕಾರ ಮಾರ್ಪಾಡು ಮಾಡಿದ ಯೋಜನೆಯಂತೆ ಹನಿ ನೀರಾವರಿಗೆ ತದ ನಂತರದ ಪ್ರಾಶಸ್ತ್ಯ ನೀಡುವಂತೆ ಸಚಿವರು ಒತ್ತಾಯಿಸಿದರು.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದ ಬಜೆಟ್‌ನಲ್ಲಿ ಹನಿ ನೀರಾವರಿಗೆ ಹಾಗೂ ಕೆರೆಗಳನ್ನು ತುಂಬಿಸಲು 5300 ಕೋಟಿ ರೂ. ಅನುದಾನ ಒದಗಿಸಲು ಘೋಷಣೆಯಾಗಿದ್ದು, 60 : 40 ಅನುಪಾತ ಹಂಚಿಕೆಯಲ್ಲಿಯೇ ರಾಜ್ಯ ಸರ್ಕಾರ ಯೋಜನೆಯಲ್ಲಿ ಕೆಲ ಮಾರ್ಪಾಡು ಮಾಡಿ ನೀಡಿದಲ್ಲಿ ತಕ್ಷಣವೇ ಹಣ ಬಿಡುಗಡೆ ಮಾಡಲು ಕೇಂದ್ರ ನೀರಾವರಿ ಸಚಿವರು ಒಪ್ಪಿಗೆ ಸೂಚಿಸಿರುತ್ತಾರೆ. ಶೀಘ್ರ ರಾಷ್ಟ್ರೀಯ ಯೋಜನೆಯಾಗಿ ಘೋಷಣೆಯಾಗುವಂತೆ ಮಾಡಲು ನಿರಂತರವಾಗಿ ಪ್ರಾಮಾಣಿಕ ಯತ್ನ ಕೈಗೊಳ್ಳಲಾಗುತ್ತಿದೆ. ರಾಷ್ಟ್ರೀಯ ಯೋಜನೆಯಾಗಿ ಘೋಷಣೆಯಾಗುವುದು ವಿಳಂಬವಾದಲ್ಲಿ, ಕೇಂದ್ರದ ಅನುದಾನ ಪಡೆಯಲು ಇರುವ ತೊಡಕನ್ನು ನಿವಾರಿಸಲು ಕೇಂದ್ರದ ಪಾಲಿನ ಶೇ. 60 ಹಾಗೂ ರಾಜ್ಯದ ಪಾಲಿನ ಶೇ. 40 ರ ಅನುಪಾತದಡಿ ಖರ್ಚು ಭರಿಸುವ ರೀತಿಯಲ್ಲಿಯೇ ರಾಜ್ಯ ಸರ್ಕಾರ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ, ಆಕ್ಸಿಲರಿ ಇರಿಗೇಷನ್ ಬೆನಿಫಿಟೆಡ್ ಪ್ರೋಗ್ರಾಂ ನಡಿ ಹಣ ಬಿಡುಗಡೆ ಮಾಡಲು ಕೇಂದ್ರ ಸರ್ಕಾರವನ್ನು ಕೋರುವ ನಿಟ್ಟಿನಲ್ಲಿ, ರಾಜ್ಯದ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಹಾಗೂ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಇಲಾಖೆಯ ಪ್ರಧಾನ ಕಾರ್ಯದರ್ಶಿ, ವಿಶ್ವೇಶ್ವರಯ್ಯ ಜಲ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಒಳಗೊಂಡ ತಾಂತ್ರಿಕ ಅಧಿಕಾರಿಗಳ ಸಭೆ ಮಾಡಿ, ತಕ್ಷಣವೇ ಕೇಂದ್ರ ಸರ್ಕಾರಕ್ಕೆ ಪತ್ರವನ್ನು ಸಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವ ಎ. ನಾರಾಯಣಸ್ವಾಮಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಕುರಿತು ಉಪಮುಖ್ಯಮಂತ್ರಿಗಳು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಂಬಂಧಪಟ್ಟ ಶಾಸಕರು, ಅಧಿಕಾರಿಗಳೊಂದಿಗೆ ಪ್ರತ್ಯೇಕವಾಗಿ ಸಭೆ ಕೈಗೊಂಡು, ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸಚಿವ ಎ. ನಾರಾಯಣಸ್ವಾಮಿ ಅವರು ಹೇಳಿದರು.

ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಮಾತನಾಡಿ, ಭದ್ರಾ ಮೇಲ್ದಂಡೆ ಯೋಜನೆಯ ಕಾಮಗಾರಿಗಳ ಕುರಿತು ಖುದ್ದು ತಾವು ಶಾಸಕರುಗಳೊಂದಿಗೆ ತೆರಳಿ, ಪ್ರಗತಿ ಕಾರ್ಯದ ಪರಿಶೀಲನೆ ಮಾಡಲಾಗಿದೆ. ಅಲ್ಲದೆ ಸಂಬಂಧಪಟ್ಟ ಶಾಸಕರುಗಳು, ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದು, ಯೋಜನೆಯ ಜಾರಿಯಲ್ಲಿರುವ ತೊಡಕುಗಳ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯಲಾಗಿದೆ. ಅಬ್ಬಿನಹೊಳಲು ಗ್ರಾಮದ ಬಳಿಯ ರೈತರು ಕಾಮಗಾರಿಗೆ ಅಡ್ಡಿಯುಂಟು ಮಾಡುತ್ತಿರುವುದು ಹಾಗೂ ಮುತ್ತಿನಕೊಪ್ಪ ಬಳಿಯ ಸಮಸ್ಯೆ ಹಾಗೂ 11 ಟವರ್ ಗಳನ್ನು ನಿರ್ಮಿಸಲು ಕೇಂದ್ರ ಪರಿಸರ ಇಲಾಖೆಯ ಆಕ್ಷೇಪಣೆ ಬಗ್ಗೆಯೂ ಮಾಹಿತಿ ಪಡೆದಿದ್ದು, ತೊಡಕುಗಳ ನಿವಾರಣೆ ನಿಟ್ಟಿನಲ್ಲಿ ಈಗಾಗಲೆ ಅಧಿಕಾರಿಗಳೊಂದಿಗೆ ಚರ್ಚಿಸಿದ್ದೇನೆ, ಆದಷ್ಟು ತ್ವರಿತವಾಗಿ ಯೋಜನೆಯನ್ನು ಪೂರ್ಣಗೊಳಿಸಲು ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದರು.

ಭದ್ರಾ ಮೇಲ್ದಂಡೆ ಯೋಜನೆ ಮುಖ್ಯ ಅಭಿಯಂತರ ಶಿವಪ್ರಕಾಶ್ ಅವರು ಮಾತನಾಡಿ, ಯೋಜನೆಯ ಪ್ಯಾಕೇಜ್ 01 ರಲ್ಲಿ ಪಂಪ್ ಹೌಸ್-01 ರ ಕಾಮಗಾರಿ ಡಿಸೆಂಬರ್ ಒಳಗೆ ಪೂರ್ಣಗೊಳ್ಳಲಿದೆ, ಪಂಪ್ ಹೌಸ್-02 ರ ಸ್ಟ್ರಕ್ಚರ್ ಕೆಲಸ ಇನ್ನೂ ನಡೆಯುತ್ತಿದೆ. ಯೋಜನೆಯಲ್ಲಿ ತುಂಗಾ ನದಿಯಿಂದ ಭದ್ರಾ ಜಲಾಶಯಕ್ಕೆ 17. 4 ಟಿ.ಎಂ.ಸಿ ನೀರನ್ನು ಜೂನ್ 15 ರಿಂದ ಅಕ್ಟೋಬರ್ 15 ರವರೆಗೆ ಮಾತ್ರ ಲಿಫ್ಟ್ ಮಾಡಲು ಅವಕಾಶವಿದೆ. ಚಿತ್ರದುರ್ಗ ಶಾಖಾ ಕಾಲುವೆ ಪ್ಯಾಕೇಜ್ 01 ರಲ್ಲಿ ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಎ. ನಾರಾಯಣಸ್ವಾಮಿ ಅವರು, ಎರಡೂ ಪಂಪ್ ಹೌಸ್‌ಗಳ ಕಾಮಗಾರಿಗಳನ್ನು ಜನವರಿ ಒಳಗಾಗಿ ಪೂರ್ಣಗೊಳಿಸಬೇಕು ಎಂದು ತಾಕೀತು ಮಾಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್, ಸೇರಿದಂತೆ ಭದ್ರಾ ಮೇಲ್ದಂಡೆ ಯೋಜನೆಯ ವಿವಿಧ ವಿಭಾಗಗಳ ಅಭಿಯಂತರರು, ಭೂಸ್ವಾಧೀನ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾಡುಗೊಲ್ಲರು ಶೈಕ್ಷಣಿಕವಾಗಿ ಬೆಳೆಯಬೇಕು : ಶಾಸಕ ಬಿ.ಜಿ.ಗೋವಿಂದಪ್ಪ



**ಹೊಸದುರ್ಗ** : ನಾನು 4 ಬಾರಿ ಶಾಸಕನಾಗಲೂ ಕಾಡುಗೊಲ್ಲ ಸಮುದಾಯದ ಸಹಕಾರವಿದೆ. ಈ ಬಾರಿಯ ಚುನಾವಣೆಯಲ್ಲಿ ನೂರಕ್ಕೆ ನೂರರಷ್ಟು ಬೆಂಬಲ ನೀಡಿ ಗೆಲ್ಲಿಸಿದ್ದೀರಿ. ಈ ನಿಮ್ಮ ಋಣ ತೀರಿಸಲು ಸಾಧ್ಯವಿಲ್ಲ. ಎಲ್ಲರಂತೆ ಬೆಳೆಯಬೇಕೆಂಬ ಛಲ ನಿಮ್ಮಲ್ಲಿ ಬರಬೇಕು. ಮುಖ್ಯವಾಗಿ ಶೈಕ್ಷಣಿಕವಾಗಿ ಸಮುದಾಯ ಸಂಪತ್ಭರಿತವಾದಾಗ ಎಲ್ಲ ರಂಗದಲ್ಲಿಯೂ ಪ್ರಗತಿ ಕಾಣಲು ಸಾಧ್ಯವೆಂದು ಶಾಸಕ ಬಿ.ಜಿ.ಗೋವಿಂದಪ್ಪ ಹೇಳಿದರು.

> ನಮ್ಮ ಕಾಡುಗೊಲ್ಲ ಸಮಾಜದವರು ಇಂದಿನಿಂದಲೂ ಕಾಂಗ್ರೆಸ್ ಬೆಂಬಲಿಸುತ್ತಾ ಬಂದಿದ್ದಾರೆ. ಇದರಿಂದಾಗಿ ಕಾಡುಗೊಲ್ಲರು ನೆಲೆಸಿರುವ ರಾಜ್ಯದ 34 ವಿಧಾನಸಭಾ ಕ್ಷೇತ್ರಗಳಲ್ಲಿಯೂ ಕಾಂಗ್ರೆಸ್ ಅಭ್ಯರ್ಥಿಗಳು ಗೆದ್ದಿದ್ದಾರೆ. ಹೊಸದುರ್ಗದಲ್ಲಿ ಸಂಪೂರ್ಣವಾಗಿ ಸಮುದಾಯ ಬೆಂಬಲಿಸಿದೆ. ಇದ-ರಿಂದಾಗಿ ಕಾಡುಗೊಲ್ಲ ಸಮಾಜದವರಿಗೆ ತಾಲ್ಲೂಕಿನಲ್ಲಿ ಕಾಂಗ್ರೆಸ್ ಪಕ್ಷ ಮುಂಬರುವ ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ 1 ಸ್ಥಾನ ಮತ್ತು ತಾಲೂಕು ಪಂಚಾಯತ್ ಚುನಾವಣೆಯಲ್ಲಿ 4 ಸ್ಥಾನಕ್ಕೆ ಟಿಕೆಟ್ ನೀಡಬೇಕು.
>
> **– ಟಿ.ರವೀಂದ್ರ,** ಅಧ್ಯಕ್ಷರು, ಕಾಡುಗೊಲ್ಲ ಸಮಾಜ,ಹೊಸದುರ್ಗ

ಪಟ್ಟಣದ ರಾಧಾಕೃಷ್ಣ ಕಲ್ಯಾಣ ಮಂಟಪದಲ್ಲಿ ಭಾನುವಾರ ಕಾಡುಗೊಲ್ಲರ ಸಂಘ ಹಾಗೂ ಕಾಡುಗೊಲ್ಲ ನೌಕರರ ಸಂಘದ ವತಿಯಿಂದ ಆಯೋಜಿಸಿದ್ದ 'ಪ್ರತಿಭಾ ಪುರಸ್ಕಾರ' ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಸಮುದಾಯ ಪ್ರಗತಿ ಕಾಣಬೇಕಾದರೆ, ಶಿಕ್ಷಣ ಬಹಳ ಮುಖ್ಯ. ಈ ನಿಟ್ಟಿನಲ್ಲಿ ಸಮುದಾಯದ ವಿದ್ಯಾರ್ಥಿಗಳು ಶ್ರಮವಹಿಸಿ ದೃಢಸಂಕಲ್ಪ ಮಾಡಿ ಓದಿ ಸಾಧನೆ ಮಾಡಬೇಕು. ಪ್ರತಿಭಾ ಪುರಸ್ಕೃತರು ಎಲ್ಲರಿಗೂ ಮಾದರಿಯಾಗುವಂತಹ ರೀತಿಯಲ್ಲಿ ಸಾಧನೆ ಮಾಡಬೇಕು. ಪಠ್ಯಪುಸ್ತಕದ ಜೊತೆಗೆ ಸಂಸ್ಕಾರಯುತ ಶಿಕ್ಷಣ ಪಡೆದುಕೊಳ್ಳಿ. ಸಮಾಜ ಗುರುತಿಸುವಂತಹ ಅತ್ಯುತ್ತಮ ಕೆಲಸ ಮಾಡಿ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಳೆದ ಬಾರಿ ಶಾಸಕನಾಗಿದ್ದ ಅವಧಿಯಲ್ಲಿ ಹೊಸದುರ್ಗ ಪಟ್ಟಣದಲ್ಲಿ ಒಂದು ಎಕರೆ ಭೂಮಿಯನ್ನು ಸಮುದಾಯಕ್ಕೆ ಕೊಟ್ಟಿದ್ದೇನೆ. ಅದು ಈಗ ಒಂದು ಕೋಟಿ ಬೆಲೆ ಬಾಳುತ್ತದೆ. ಈ ಜಾಗದಲ್ಲಿ ಕಾಡುಗೊಲ್ಲ ಸಮುದಾಯ ಭವನ ನಿರ್ಮಾಣ ಮಾಡಲು ಸಹಕಾರ ನೀಡಲು ಬದ್ಧನಾಗಿದ್ದೇನೆ ಎಂದು ಭರವಸೆ ನೀಡಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಕಾ.ರಾಮೇಶ್ವರಪ್ಪ ಮಾತನಾಡಿ, ಹಿಂದುಳಿದ ಸಮಾಜಗಳಿಗೆ ನಾಯಕರಾಗುವುದು ಕಠಿಣ. ಹೊಸದುರ್ಗದ ಕಾಡುಗೊಲ್ಲರು ಅಪಾರ ಹೋರಾಟ ಮಾಡಿದ್ದಾರೆ. ಸತ್ಯ, ಧರ್ಮ, ರಾಜಕೀಯ, ಆರ್ಥಿಕ ಸಾಮಾಜಿಕ ವಹಿವಾಟು ನಡೆಯುತ್ತಿರುವುದು ಜಾತಿಯ ಆಧಾರದ ಮೇಲೆ. ಜಾತಿಯ ಅಸ್ಮಿತೆ ಎಲ್ಲಾ ರೀತಿಯ ಸೌಲಭ್ಯ ಮತ್ತು ಶಕ್ತಿಯನ್ನು ಒದಗಿಸುತ್ತದೆ. ಈ ವೇಳೆ ಎಸ್ಸೆಸ್ಸೆಲ್ಸಿ ಹಾಗೂ ಪಿಯುಸಿಯಲ್ಲಿ ಅಧಿಕ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನಡೆಸಲಾಯಿತು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ್, ಪುರಸಭೆ ಸದಸ್ಯ ಸಂತೋಷ್, ಎಪಿಎಂಸಿ ಉಪಾಧ್ಯಕ್ಷ ಮಂಜುನಾಥ್, ಬಿಇಒ ಸೈಯದ್ ಮೋಸಿನ್, ಕಸಾಪ ತಾಲೂಕು ಘಟಕದ ನಿಕಟಪೂರ್ವ ಅಧ್ಯಕ್ಷ ಮೆಂಗಸಂದ್ರ ಧನಂಜಯ್, ಕುರುಬ ಸಮಾಜದ ಅಧ್ಯಕ್ಷ ಮಂಜುನಾಥ್, ಪ್ರಾಥಮಿಕ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಪ್ರಕಾಶ್, ಕೆಪಿಸಿಸಿ ರಾಜ್ಯ ಉಪಾಧ್ಯಕ್ಷ ಮಹೇಶ್, ಜಾನಪದ ಕಲಾವಿದ ಮೋಹನ್ ಕುಮಾರ್, ಕಾಡುಗೊಲ್ಲ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಟಿ. ರವೀಂದ್ರ, ಗಣ್ಯರುಗಳಾದ ರಾಮಪ್ಪ, ರಂಗಸ್ವಾಮಿ, ಚಿಕ್ಕಣ್ಣ, ರಾಮೇಶ್ವರಪ್ಪ, ಗುರುಸ್ವಾಮಿ, ಪ್ರೇಮಾ ರವೀಂದ್ರ, ನೇತ್ರಾವತಿ, ಕೃಷ್ಣಮೂರ್ತಿ, ಪ್ರಕಾಶ್, ರಾಜಣ್ಣ, ರಮೇಶ್, ಎನ್ ಮೂರ್ತಿ, ಶಿವಲಿಂಗಪ್ಪ, ರಂಗಸ್ವಾಮಿ, ಯಶ್ವಂತ್ ಗೌಡ ಸೇರಿದಂತೆ ಹಲವರಿದ್ದರು.

# ಸಾಯಿಬಾಬಾ ಮಂದಿರದಲ್ಲಿ ಗುರುಪೂಜಾ ಕಾರ್ಯಕ್ರಮ



**ಚಳ್ಳಕೆರೆ** : ನಗರದ ಶ್ರೀಯೋಗಿ ನಾರೇಯಣ ಬಲಿಜ ಸಂಘ ಮತ್ತು ವೆಂಕಟಸಾಯಿ ಸೇವಾ ಟ್ರಸ್ಟ್ ವತಿಯಿಂದ ಆಗಸ್ಟ್ 10ರ ಗುರುವಾರ ಬೆಳಗ್ಗೆ 10.30ಕ್ಕೆ ಅಧಿಕ ಶ್ರಾವಣ ಮಾಸದ ಅಂಗವಾಗಿ ಸಾಯಿ ಬಾಬಾ ಮಂದಿರದಲ್ಲಿ ಗುರುಪೂಜಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಘ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ನರಹರಿ ಸದ್ಗುರುಪೀಠದ ಪೀಠಾಧ್ಯಕ್ಷ ಡಾ.ವೈ.ರಾಮರಾಮ್ ವಹಿಸಲಿದ್ದು, ಕರ್ನಾಟಕ ರಾಜ್ಯ ಸಮಗ್ರ ಬಲಿಜ ವೇದಿಕೆ ರಾಜ್ಯಾಧ್ಯಕ್ಷ ಎಂ.ಪಿ.ಮುನಿಕೃಷ್ಣಪ್ಪ ಮುಖ್ಯ ಅತಿಥಿಯಾಗಿ ಭಾಗವಹಿಸುವರು. ವಿಜಯನಗರ ಜಿಲ್ಲೆಯ ಬಲಿಜ ಸಂಘದ ಅಧ್ಯಕ್ಷ ಕಾಳಿದಾಸ ಸೇರಿದಂತೆ ಹಲವಾರು ಬಲಿಜ ಸಮಾಜದ ಮುಖಂಡರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

ಗುರುಪೂಜಾ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತರು ಆಗಮಿಸಿ ಯಶಸ್ವಿಗೊಳಿಸುವಂತೆ ಬಲಿಜ ಯುವ ಘಟಕದ ಅಧ್ಯಕ್ಷ ಜಿ.ವೆಂಕಟೇಶ್, ವೆಂಕಟಸಾಯಿ ಟ್ರಸ್ಟ್ ಉಪಾಧ್ಯಕ್ಷ ಕೆ.ಎಂ.ಜಗದೀಶ್ ಮನವಿ ಮಾಡಿದ್ದಾರೆ.




## ಫಾಸ್ಟ್ ನ್ಯೂಸ್

### ಸಬ್ ಇನ್ಸ್‌ಪೆಕ್ಟರ್ ಹುದ್ದೆಗಳಿಗೆ ಅರ್ಜಿ ಆಹ್ವಾನ



**ದಾವಣಗೆರೆ** : ಸಿಬ್ಬಂದಿ ನೇಮಕಾತಿ ಆಯೋಗದ(ಎಸ್.ಎಸ್.ಸಿ) ವತಿಯಿಂದ ದೆಹಲಿ ಪೊಲೀಸ್ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿ(ಸಿ.ಎ.ಪಿ.ಎಫ್) ಸಬ್‌ಇನ್ಸ್‌ಪೆಕ್ಟರ್(ಎಸ್.ಐ) ಹುದ್ದೆಗಳ ಭರ್ತಿಗಾಗಿ ಯಾವುದೇ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು 20 ರಿಂದ 25 ವರ್ಷ ವಯೋಮಾನದವರಾಗಿರಬೇಕು. ಪ.ಜಾತಿ, ಪ.ಪಂಗಡದ ಅಭ್ಯರ್ಥಿಗಳಿಗೆ 5 ವರ್ಷ ಹಾಗೂ ಓಬಿಸಿ ಅಭ್ಯರ್ಥಿಗಳಿಗೆ 3 ವರ್ಷ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

ಯಾವುದೇ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿದ್ದು, ಆಸಕ್ತರು ಆಗಸ್ಟ್ 15 ರೊಳಗಾಗಿ ವೆಬ್‌ಸೈಟ್ **https://ssc.nic.in** ಅಥವಾ **www.ss-ckkr.kar.nic.in** ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ 080–25502520 ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದೂ. ಸಂ. 7406323294 ಗೆ ಸಂಪರ್ಕಿಸಲು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ. ಡಿ ತಿಳಿಸಿದ್ದಾರೆ.

### ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ದಾವಣಗೆರೆ** : ಜಿಲ್ಲಾ ಮೀನುಗಾರಿಕೆ ಇಲಾಖೆ ವತಿಯಿಂದ 2023–24 ನೇ ಸಾಲಿನ ಪ್ರಧಾನಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ ವಿವಿಧ ಘಟಕಗಳಿಗೆ ಸಹಾಯಧನಕ್ಕಾಗಿ ಜಿಲ್ಲೆಯ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಮೀನು ಕೃಷಿ ಕೊಳಗಳ ನಿರ್ಮಾಣ–10 ಹೆ, ಮೀನು ಕೃಷಿಕೊಳದ ಹೂಡಿಕೆ ವೆಚ್ಚಕ್ಕೆ ಸಹಾಯ–10 ಹೆ, ಸಿಹಿ ನೀರು ಬಯೋಫ್ಲಾಕ್ ಘಟಕ ಸ್ಥಾಪನೆಗೆ ಸಹಾಯಧನ–1, ಇನ್ಸುಲೇಟೆಡ್ (ಶಾಖನಿರೋಧಕ) ವಾಹನ ಖರೀದಿಗೆ ಸಹಾಯಧನ–1 ಹಾಗೂ ಯಾಂತ್ರೀಕೃತ ದೋಣಿ ಖರೀದಿಗೆ–2 ರಂತೆ ಸಹಾಯಧನ ಘಟಕಗಳ ಉಪಯೋಜನೆಗಳನ್ನು ಪ್ರಾರಂಭಿಸಲು ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಶೇ. 40% ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಮಹಿಳಾ ಫಲಾನುಭವಿಗಳಿಗೆ ಶೇ. 60% ರಷ್ಟು ಸಹಾಯಧನ ನೀಡಲಾಗುತ್ತದೆ.

ಆಸಕ್ತರು ಆಗಸ್ಟ್ 22 ರೊಳಗಾಗಿ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯಿಂದ ಅರ್ಜಿಗಳನ್ನು ಪಡೆದು ಸಲ್ಲಿಸಲು ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಅಣ್ಣಪ್ಪಸ್ವಾಮಿ ತಿಳಿಸಿದ್ದಾರೆ.

### ಕಿರಿಯ ಇಂಜಿನಿಯರ್ ಹುದ್ದೆಗೆ ಅರ್ಜಿ ಆಹ್ವಾನ

**ದಾವಣಗೆರೆ** : ಸಿಬ್ಬಂದಿ ನೇಮಕಾತಿ ಆಯೋಗದ **(SSC)** ವತಿಯಿಂದ ಕಿರಿಯ ಇಂಜಿನಿಯರ್ (ಸಿವಿಲ್, ಮೆಕ್ಯಾನಿಕಲ್, ಇಲೆಕ್ಟ್ರಿಕಲ್ ಮತ್ತು ಕ್ವಾಂಟಿಟಿ ಸರ್ವೇಯಿಂಗ್ ಆಯಂಡ್ ಕಾಂಟ್ರಾಕ್ಟ್ಸ್) ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಸ್ಪರ್ಧಾತ್ಮಕ ಪರೀಕ್ಷೆಯು ಕಂಪ್ಯೂಟರ್ ಆಧಾರಿತವಾಗಿದ್ದು, ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ **https://ssc.nic.in CxÀªÁ www.ssckkr.kar.nic.in** ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಆಗಸ್ಟ್.16 ಕೊನೆಯದಿನವಾಗಿರುತ್ತದೆ. 30 ವರ್ಷದ ವಯೋಮಾನವಾರಗಿರಬೇಕು. ಪ.ಜಾತಿ, ಪ.ಪಂಗಡದ ಅಭ್ಯರ್ಥಿಗಳಿಗೆ 5 ವರ್ಷ ಹಾಗೂ ಓಬಿಸಿ ಅಭ್ಯರ್ಥಿಗಳಿಗೆ 3 ವರ್ಷ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂ.08025502520 ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದೂ. 7406323294ಗೆ ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ.ಡಿ. ತಿಳಿಸಿದ್ದಾರೆ.

### ಅಪರ ಜಿಲ್ಲಾಧಿಕಾರಿಗಳಿಂದ ಸ್ವಚ್ಛತೆ ಪರಿಶೀಲನೆ

**ಚಿತ್ರದುರ್ಗ** : ನಗರದ ಕವಾಡಿಗರ ಹಟ್ಟಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಭಾನುವಾರದಂದು ಭೇಟಿ ನೀಡಿ ಈ ಪ್ರದೇಶದಲ್ಲಿನ ಸ್ವಚ್ಛತೆ, ಜನರ ಆರೋಗ್ಯ ಸ್ಥಿತಿಗತಿ ಹಾಗೂ ಕೈಗೊಂಡಿರುವ ನೈರ್ಮಲ್ಯ ಕಾರ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು.

ಕಲುಷಿತ ನೀರು ಸೇವನೆಯಿಂದ ಕವಾಡಿಗರ ಹಟ್ಟಿಯಲ್ಲಿ ಸಾರ್ವಜನಿಕರು ಅಸ್ವಸ್ಥರಾಗಿದ್ದ ಹಿನ್ನೆಲೆಯಲ್ಲಿ, ಕಳೆದ ನಾಲ್ಕೈದು ದಿನಗಳಿಂದಲೂ ಈ ಪ್ರದೇಶದ ಸಾರ್ವಜನಿಕರಲ್ಲಿ ಆತಂಕ ಮನೆ ಮಾಡಿತ್ತು. ಆರೋಗ್ಯ ಇಲಾಖೆಯಿಂದ, ಇಲ್ಲಿನ ಸಾರ್ವಜನಿಕರಿಗೆ ಕುಡಿಯುವ ನೀರು, ನೈರ್ಮಲ್ಯ, ಆರೋಗ್ಯ ಕಾಪಾಡಿಕೊಳ್ಳುವ ಬಗ್ಗೆಯೂ ಆರೋಗ್ಯ ಶಿಕ್ಷಣವನ್ನು ನೀಡಲಾಗುತ್ತಿದೆ. ಅಲ್ಲದೆ ಇಲ್ಲಿನ ನೀರಿನ ಸಂಗ್ರಹಗಾರವನ್ನು ಸ್ವಚ್ಛಗೊಳಿಸಲಾಗಿದ್ದು, ಈ ಪ್ರದೇಶದಲ್ಲಿ ತಾತ್ಕಾಲಿಕವಾಗಿ ಆರೋಗ್ಯ ಕೇಂದ್ರವನ್ನು ತೆರೆದು, ತಜ್ಞ ವೈದ್ಯರಿಂದ ಸಾರ್ವಜನಿಕರಿಗೆ ಸೂಕ್ತ ಚಿಕಿತ್ಸೆ ಹಾಗೂ ಔಷಧೋಪಚಾರ ನೀಡಲಾಗುತ್ತಿದೆ. ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಭಾನುವಾರದಂದು ಕವಾಡಿಗರ ಹಟ್ಟಿಗೆ ತೆರಳಿ, ಮನೆ ಮನೆ ಭೇಟಿ ಕಾರ್ಯ ಕೈಗೊಂಡು, ಸಾರ್ವಜನಿಕರಿಂದ ಆರೋಗ್ಯದ ಬಗ್ಗೆ ವಿಚಾರಿಸಿದರು, ಅಲ್ಲದೆ ಇಲ್ಲಿ ಕೈಗೊಳ್ಳಲಾಗುತ್ತಿರುವ ಸ್ವಚ್ಛತಾ ಕಾರ್ಯಗಳು ಹಾಗೂ ಸಾರ್ವಜನಿಕರ ಚಿಕಿತ್ಸಾ ವ್ಯವಸ್ಥೆಯ ಬಗ್ಗೆ ಪರಿಶೀಲಿಸಿ, ಸಿಬ್ಬಂದಿಗಳಿಗೆ ಸಲಹೆ, ಸೂಚನೆಗಳನ್ನು ನೀಡಿದರು.

ನಗರಸಭೆ ಪೌರಾಯುಕ್ತ ಶ್ರೀನಿವಾಸ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಕಾಶಿ, ಸೇರಿದಂತೆ ವಿವಿಧ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಸಚಿವ ದಿನೇಶ್ ಗುಂಡೂರಾವ್ ಭೇಟಿ ಮೃತರ ಕುಟುಂಬದರಿಗೆ ಸಾಂತ್ವನ

**ಚಿತ್ರದುರ್ಗ** : ಕಲುಷಿತ ನೀರು ಸೇವಿಸಿ 5 ಜನ ಮೃತಪಟ್ಟು, 180ಕ್ಕೂ ಹೆಚ್ಚು ಜನರು ಅಸ್ವಸ್ಥರಾದ ಚಿತ್ರದುರ್ಗ ನಗರದ ಕವಾಡಿಗರಹಟ್ಟಿಗೆ ಶನಿವಾರ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಪರಿಸ್ಥಿತಿಯ ಬಗ್ಗೆ ವಿವರವಾಗಿ ಅವಲೋಕಿಸಲು ಬೆಂಗಳೂರಿನ ಸಿ.ವಿ.ರಾಮನ್ ಆಸ್ಪತ್ರೆ ವೈದ್ಯರ ತಂಡ ಕವಾಡಿಗರಹಟ್ಟಿಗೆ ಆಗಮಿಸಿ ಬೀಡು ಬಿಟ್ಟಿದೆ. ವೈದ್ಯಕೀಯ ಶಿಕ್ಷಣ ಇಲಾಖೆಯು ಬಿ.ಎಂ.ಆರ್.ಸಿ ಆಸ್ಪತ್ರೆಯಿಂದ ತಂಡವನ್ನು ಸ್ಥಳಕ್ಕೆ ಕಳುಹಿಸುತ್ತಿದ್ದಾರೆ. ಸ್ಥಳದಲ್ಲಿ ಎಲ್ಲಾ ರೀತಿಯ ವೈದ್ಯಕೀಯ ಸವಲತ್ತುಗಳನ್ನು ನೀಡಲಾಗಿದೆ. ತುರ್ತು ಸ್ಪಂದನಾ ತಂಡ ಗ್ರಾಮದಲ್ಲಿದ್ದು, ವಾಂತಿ ಬೇಧಿ ಲಕ್ಷಣ ಕಂಡುಬಂದರೆ ತಕ್ಷಣವೇ ಹೆಚ್ಚಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗುತ್ತಿದೆ ಎಂದು ಆರೋಗ್ಯ ಇಲಾಖೆ ಆಯುಕ್ತ ರಣದೀಪ್ ಹೇಳಿದರು.

ಘಟನೆಯಲ್ಲಿ ಅಸ್ವಸ್ಥರಾದವರಿಗೆ ತಕ್ಷಣವೇ ಸೂಕ್ತ ಚಿಕಿತ್ಸೆ ನೀಡಲಾಗಿದೆ. ಮೃತರ ಪೈಕಿ ಒಬ್ಬರು ಬೆಂಗಳೂರು, ಇನ್ನೊಬ್ಬರು ದಾವಣಗೆರೆಯಲ್ಲಿ ಚಿಕಿತ್ಸೆ ದಾಖಲಾಗಿದ್ದರು. ಕೆಲವು ಜನರು ಗುಣಲಕ್ಷಣ ಆಧರಿಸಿ ಮಾತ್ರೆಗಳನ್ನು ಪಡೆದು ಮನೆಯಲ್ಲಿ ಉಳಿದಿದ್ದರು. ರೋಗ ಲಕ್ಷಣ ಹೆಚ್ಚಾದ ಬಳಿಕ ಆಸ್ಪತ್ರೆ ದಾಖಲಾಗಿದ್ದಾರೆ. ತುರ್ತಾಗಿ ಚಿಕಿತ್ಸೆ ನೀಡಿ ಹೆಚ್ಚಿನ ಸಾವು ನೋವುಗಳು ಆಗದ ರೀತಿ ತಡೆಯಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಉತ್ತರಿಸಿದರು.

ಕವಾಡಿಗರಹಟ್ಟಿಯ ಪ್ರಾಥಮಿಕ ಶಾಲೆಯಲ್ಲಿ ತಾತ್ಕಾಲಿಕ ಆರೋಗ್ಯ ಕೇಂದ್ರವನ್ನು ಸಹ ತೆರೆಯಲಾಗಿದೆ. ನೀರು ಕಲುಷಿತಗೊಳ್ಳಲು ಕಾಲರಾ ಬ್ಯಾಕ್ಟೀರಿಯಾ ಕಾರಣ ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ. ಬಾದಿತ ಪ್ರದೇಶದಲ್ಲಿ 300ಕ್ಕೂ ಹೆಚ್ಚು ಮನೆಗಳು ಇದ್ದು, 2500ಕ್ಕೂ ಹೆಚ್ಚಿನ ಜನರು ವಾಸವಾಗಿದ್ದಾರೆ. ಇದರಲ್ಲಿ 180ಕ್ಕೂ ಹೆಚ್ಚು ಜನರು ಅಸ್ವಸ್ಥಗೊಂಡಿದ್ದಾರೆ. ಸದ್ಯ ಆಸ್ಪತ್ರೆಯಲ್ಲಿ 155 ಜನರು ಚಿಕಿತ್ಸೆ ಪಡೆಯುತ್ತಿದ್ದಾರೆ. ಇದರಲ್ಲಿ ಇಬ್ಬರ ಸ್ಥಿತಿ ಗಂಭೀರವಾಗಿದೆ ಎಂದು ಡಿಹೆಚ್‌ಓ ಡಾ.ಆರ್.ರಂಗನಾಥ್ ಆರೋಗ್ಯ ಸಚಿವರಿಗೆ ಮಾಹಿತಿ ನೀಡಿದರು.

**ತಲಾ 10 ಲಕ್ಷ ಪರಿಹಾರ ಚೆಕ್ ವಿತರಣೆ** : ಕವಾಡಿಗರಹಟ್ಟಿಯಲ್ಲಿನ ಕಲುಷಿತ ನೀರು ಸೇವನೆಯ ಪ್ರಕರಣದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ರೂ.5 ಲಕ್ಷ ಹಾಗೂ ನಗರಸಭೆ ನಿಧಿಯಿಂದ ರೂ.5 ಲಕ್ಷ ಸೇರಿ, ತಲಾ ರೂ.10 ಲಕ್ಷ ಪರಿಹಾರ ವಿತರಣೆ ಮಾಡಲಾಗಿದೆ. ಈ ಚೆಕ್‌ಗಳನ್ನು ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮೃತರ ಕುಟುಂಬ ವರ್ಗದವರಿಗೆ ಹಸ್ತಾಂತರಿಸಿದರು. ಮೃತಪಟ್ಟ ಐದು ಜನರ ಪೈಕಿ ನಾಲ್ವರು ಕುಟುಂಬದವರಿಗೆ ಚೆಕ್ ನೀಡಲಾಗಿದೆ. ಓರ್ವ ಮೃತರ ಪತ್ನಿಯೂ ಆಸ್ಪತ್ರೆ ದಾಖಲಾಗಿದ್ದಾರೆ. ಹೀಗಾಗಿ ಅವರು ಆಸ್ಪತ್ರೆಯಿಂದ ಬಿಡುಗಡೆ ಹೊಂದಿದ ತಕ್ಷಣ ಚೆಕ್ ವಿತರಣೆಯಾಗಲಿದೆ.

**ಕವಾಡಿಗರಹಟ್ಟಿ ಘಟನೆ ಕುರಿತು ಸಚಿವರ ವಿಷಾದ** : ಈ ಸಂದರ್ಭಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಕವಾಡಿಗರಹಟ್ಟಿ ಘಟನೆ ತುಂಬಾ ನೋವುಂಟು ಮಾಡಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಕವಾಡಿಗರಹಟ್ಟಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸಮೀಕ್ಷೆ ಮಾಡಿ ವರದಿ ಕೊಡಲು ರಾಜ್ಯದಿಂದ ತಂಡ ಕಳುಹಿಸಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಕಲುಷಿತ ನೀರು ಸೇವನೆಯಿಂದ ಅಸ್ವಸ್ಥರಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವರ ಯೋಗಕ್ಷೇಮ ವಿಚಾರಿಸಿ, ಘಟನೆಯಲ್ಲಿ ಮೃತಪಟ್ಟ ಕುಟುಂಬದವರಿಗೆ ತಲಾ ರೂ.10 ಲಕ್ಷ ಪರಿಹಾರ ಘೋಷಿಸಿ, ಪರಿಹಾರ ಧನವನ್ನು ವಿತರಣೆ ಮಾಡಿದ್ದಾರೆ. ಶಾಸಕ ಕೆ.ಸಿ.ವೀರೇಂದ್ರ ಅವರು ನಿರಂತರವಾಗಿ ಕವಾಡಿಗರ ಹಟ್ಟಿ ಜನರಿಗೆ ಊಟ, ಔಷಧಿ ಸೇರಿದಂತೆ ಎಲ್ಲಾ ರೀತಿಯ ಸಹಾಯ, ಸಹಕಾರ ನೀಡಿದ್ದಾರೆ. ಇದರ ಜೊತೆ–ಗೆ ಜಿಲ್ಲಾಡಳಿತ, ತಾಲ್ಲೂಕು ಆಡಳಿತ ಸ್ಥಳದಲ್ಲಿ ಮೊಕ್ಕಾಂ ಹೂಡಿ, ಅಗತ್ಯ ನೆರವು ನೀಡುತ್ತಿದೆ ಎಂದರು

ಕವಾಡಿಗರಹಟ್ಟಿಯ ಪ್ರಕರಣ ಮತ್ತೆ ಪುನರಾವರ್ತನೆಯಾಗಬಾರದು. ಯಾವ ಕಾರಣಕ್ಕೆ ಘಟನೆ ಸಂಭವಿಸಿದೆ, ಹೇಗೆ ಆಗಿದೆ ಎಂಬುವುದರ ಕುರಿತು ಸಂಪೂರ್ಣ ವರದಿಯನ್ನು ಜಿಲ್ಲಾಡಳಿತ, ನಗರಸಭೆ ಹಾಗೂ ಆರೋಗ್ಯ ಇಲಾಖೆ ವತಿಯಿಂದ ತನಿಖೆ ಮಾಡಿ ಸ್ಪಷ್ಟ ವರದಿ ಪಡೆದು ನಂತರ ಎಲ್ಲಾ ರೀತಿಯ ಸೂಕ್ತ ಕ್ರಮಗಳನ್ನು ಸರ್ಕಾರ ಕೈಗೊಳ್ಳಲಿದೆ ಎಂದು ತಿಳಿಸಿದರು.

**ಕವಾಡಿಗರಹಟ್ಟಿಯ ಸಮಗ್ರ ಅಭಿವೃದ್ಧಿಗೆ ಕ್ರಮ** : ಕವಾಡಿಗರಹಟ್ಟಿಯ ಸಮಗ್ರ ಅಭಿವೃದ್ಧಿಗೆ ಕ್ರಮವಹಿಸಲಾಗುವುದು ಎಂದು ಆರೋಗ್ಯ ಸಚಿವರು ತಿಳಿಸಿದರು. ಸರ್ಕಾರದ ಅನುದಾನ ಬಳಸಿ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸಲು ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವರು ಆದೇಶ ನೀಡಿದ್ದು, ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗುವುದು ಎಂದರು.

ಔಷಧಿಗೆ ಚೀಟಿ ಬರೆದುಕೊಡುವ ವೈದ್ಯರ ವಿರುದ್ಧ ಕ್ರಮ: ಸರ್ಕಾರಿ ಆಸ್ಪತ್ರೆಗಳಲ್ಲಿ ಹೊರಗಿನಿಂದ ಔಷಧಿಗಾಗಿ ಚೀಟಿ ಬರೆದು ಕೊಡುವ ವೈದ್ಯರ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದು ಆರೋಗ್ಯ ಸಚಿವರು ತಿಳಿಸಿದರು.

ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಹೊರಗಡೆ ಔಷಧಿಗಳನ್ನು ಬರೆದುಕೊಡುವಂತಿಲ್ಲ. ಆಸ್ಪತ್ರೆಯವರೇ ಖರೀದಿ ಮಾಡಿ ಔಷಧಿಗಳನ್ನು ವಿತರಿಸಬೇಕು. ಸರ್ಕಾರಿ ಆಸ್ಪತ್ರೆಗಳಿಗೆ ಸರಬರಾಜಾಗುವ ಕೆಲವು ಔಷಧಿಗಳಲ್ಲಿ ಕೊರತೆ ಇದೆ. ಆರೋಗ್ಯ ಇಲಾಖೆಯಿಂದಲೇ ಔಷಧಿ ಸರಬರಾಜು ಮಾಡುವುದು ತಡವಾಗಿದ್ದು, ಅದನ್ನು ಸರಿಪಡಿಸುವ ಕೆಲಸ ಮಾಡಲಾಗುವುದು ಎಂದರು.

**ಜಿಲ್ಲಾ ಆಸ್ಪತ್ರೆಗೆ ಭೇಟಿ, ಆರೋಗ್ಯ ವಿಚಾರಣೆ** : ಕವಾಡಿಗರಹಟ್ಟಿಯ ಭೇಟಿ ನಂತರ ನೇರವಾಗಿ ಆರೋಗ್ಯ ಸಚಿವರು ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಚಿಕಿತ್ಸೆ ಪಡೆಯುತ್ತಿರುವವರ ಆರೋಗ್ಯ ವಿಚಾರಿಸಿದರು.

ಈ ಸಂದರ್ಭದಲ್ಲಿ ಸಾರ್ವಜನಿಕರು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆಗಳಿಗೆ ಹಣ ಪಡೆಯುತ್ತಿರುವ ಕುರಿತು ಸಚಿವರ ಗಮನಕ್ಕೆ ತಂದರು. ಇದರಿಂದ ಕುಪಿತರಾದ ಸಚಿವರು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸವರಾಜ್ ಅವರಿಗೆ, ನಿಮ್ಮ ಮೇಲೆ ಸಾಕಷ್ಟು ದೂರುಗಳು ಬರುತ್ತಿವೆ. ಇಂತಹ ಘಟನೆಯನ್ನು ಯಾವುದೇ ಕಾರಣಕ್ಕೂ ಸರ್ಕಾರ ಸಹಿಸುವುದಿಲ್ಲ. ಹೆರಿಗೆ ಮಾಡಿಸಲು, ಎಕ್ಸರೇ, ಸ್ಕ್ಯಾನಿಂಗ್‌ಗಳಿಗೆ ಹಣ ಪಡೆಯುತ್ತಿರುವ ಕುರಿತು ಮಹಿಳೆಯರು ದೂರುಗಳನ್ನು ಆಸ್ಪತ್ರೆಯ ಆವರಣಲ್ಲಿ ನನಗೆ ಗಮನಕ್ಕೆ ತಂದಿದ್ದಾರೆ. ನೀವು ಸರಿಯಾಗಿ ಕರ್ತವ್ಯ ನಿರ್ವಹಿಸಿದರೆ, ಉಳಿದ ವೈದ್ಯರು ಹಾಗೂ ಸಿಬ್ಬಂದಿ ಸರಿಯಾಗಿ ಕರ್ತವ್ಯ ನಿರ್ವಹಿಸುತ್ತಾರೆ. ನಿಮ್ಮ ವಿರುದ್ದ ಸೂಕ್ತ ಕ್ರಮಕೈಗೊಂಡು ಅಮಾನತು ಮಾಡಲಾಗುವುದು ಎಂದು ತಿಳಿಸಿದರು.

ತತಕ್ಷಣವೇ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸವರಾಜ್ ಅವರನ್ನು ಸೇವೆಯಿಂದ ಅಮಾನತುಗೊಳಿಸಲು ಅಧಿಕಾರಿಗಳಿಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಶಾಸಕರಾದ ಕೆ.ಸಿ.ವೀರೇಂದ್ರ ಪಪ್ಪಿ, ಟಿ.ರಘುಮೂರ್ತಿ, ಮಾಜಿ ಸಚಿವ ಹೆಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಆರೋಗ್ಯ ಇಲಾಖೆ ಆಯುಕ್ತ ರಣದೀಪ್, ಸಮಾಜ ಕಲ್ಯಾಣ ಇಲಾಖೆ ಆಯುಕ್ತ ರಾಕೇಶ್ ಕುಮಾರ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಪರಶುರಾಮ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಆರೋಗ್ಯದಿಂದರಬೇಕೆಂದರೆ ಕ್ರೀಡೆಯಲ್ಲಿ ಭಾಗವಹಿಸಬೇಕು : ಪಿಡಿಓ ಬಸವರಾಜ್

**ಚಿತ್ರದುರ್ಗ** : ಮನುಷ್ಯನ ಆರೋಗ್ಯ ಸದೃಢವಾಗಬೇಕಾದರೆ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಪಾಠದ ಜೊತೆಗೆ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವುದರ ಮೂಲಕ ತಮ್ಮ ಬುದ್ಧಿಶಕ್ತಿಯನ್ನು ಹೆಚ್ಚಿಸಿಕೊಳ್ಳಬೇಕೆಂದು ಆಲಘಟ್ಟ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ್ ಅವರು ತಿಳಿಸಿದರು.



ತಾಲೂಕಿನ ಸಿರಿಗೆರೆ ಸಮೀಪದ ಆಲಘಟ್ಟ ಗ್ರಾಮದಲ್ಲಿ ಶನಿವಾರ ಮಡಿಲು ಗ್ರಾಮೀಣ ಮತ್ತು ನಗರ ಅಭಿವೃದ್ಧಿ ಸಂಸ್ಥೆ ವತಿಯಿಂದ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಸ್ಪೋರ್ಟ್ಸ್ ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ವಾಲಿಬಾಲ್, ತ್ರೋಬಾಲ್, ಶಟಲ್ ಕಾಕ್, ರಿಂಗ್, ಚೆಸ್ ಬೋರ್ಡ್, ಸ್ಲಿಪಿಂಗ್ ವೈರ್ ಗಳನ್ನು ವಿತರಿಸಿ ಮಾತನಾಡಿದರು. ಮನುಷ್ಯನಿಗೆ ಆರೋಗ್ಯ ಚೆನ್ನಾಗಿ ಇರಬೇಕಾದರೆ ಪ್ರತಿನಿತ್ಯ ಯೋಗಾಸನ ಮಾಡಬೇಕು ಹಾಗೂ ಇತರೆ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ ತಮ್ಮ ದೇಹವನ್ನು ಸಮತೋಲನದಲ್ಲಿಟ್ಟುಕೊಳ್ಳಬೇಕು ಆಗ ಮಾತ್ರ ಮನುಷ್ಯನ ಬುದ್ದಿಯು ವಿಕಾಸ ಹೊಂದಲು ಸಾಧ್ಯವಾಗುತ್ತದೆ ಎಂದರು.

ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಕ್ರೀಡಾ ಚಟುವಟಿಕೆಗಳಲ್ಲಿ ಆಸಕ್ತಿ ಹೆಚ್ಚಾಗಿರುತ್ತವೆ ಅಂತಹ ಮಕ್ಕಳಿಗೆ ಸ್ಪೋರ್ಟ್ಸ್ ಕಿಟ್ ವಿತರಣೆ ಮಾಡಲು ಮುಂದೆ ಬಂದಿರುವಂತಹ ಮಡಿಲು ಸಂಸ್ಥೆ ಈಗಾಗಲೇ ಜಿಲ್ಲೆಯಲ್ಲಿ ವಿಶೇಷ ಸ್ಥಾನಮಾನವನ್ನು ಗಳಿಸಿದೆ ಪರಿಸರ ಸಂರಕ್ಷಣೆ, ನಾಲೆಡ್ಜ್ ಕಾಂಪಿಟೇಶನ್, ಸ್ವಚ್ಛತೆ ಅರಿವು ಮೂಡಿಸುವುದು, ಮತದಾನ ಜಾಗೃತಿ ಮೂಡಿಸುವುದು ಹೀಗೆ ಅನೇಕ ಸಾಮಾಜಿಕ ಕಾರ್ಯಗಳಲ್ಲಿ ಸಂಸ್ಥೆ ತೊಡಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳ ಜೀವನ ಅತ್ಯಂತ ಶ್ರೇಷ್ಠವಾದ ಜೀವನ ಓದು ಎಷ್ಟು ಮುಖ್ಯವೋ ಜೀವನದಲ್ಲಿ ಯಶಸ್ಸು ಗಳಿಸುವುದು ಅಷ್ಟೇ ಮುಖ್ಯ ವಿದ್ಯಾರ್ಥಿಗಳು ತಮ್ಮ ಕನಸುಗಳನ್ನು ನನಸು ಮಾಡಿಕೊಳ್ಳಬೇಕಾದರೆ ಪ್ರಸಕ್ತ ಸ್ಪರ್ಧಾತ್ಮಕ ದಿನಗಳಲ್ಲಿ ಹೆಚ್ಚಿನದಾಗಿ ಓದಿನ ಕಡೆಗೆ ಗಮನ ಹರಿಸಬೇಕಾಗಿದೆ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತನ್ನು ಹೇಳಿದರು.

ಪ್ರಾಥಮಿಕ ಶಾಲೆ ಆಲಘಟ್ಟ ಪ್ರಭಾರ ಮುಖ್ಯ ಶಿಕ್ಷಕರಾದ ತಿಪ್ಪೇಸ್ವಾಮಿ ಅವರು ಮಾತನಾಡಿ ಸರ್ಕಾರಿ ಶಾಲೆ ಮಕ್ಕಳು ಯಾವುದರಲ್ಲೂ ಸಹ ಕಡಿಮೆ ಇಲ್ಲ ಆದರೆ ಮಕ್ಕಳಿಗೆ ಕ್ರೀಡಾ ಸಲಕರಣೆಗಳ ಕೊರತೆ ಇದೆ ಆದ್ದರಿಂದ ಮಕ್ಕಳಿಗೆ ಕ್ರೀಡೆಯಲ್ಲಿ ತೊಡಗಿಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ, ಸಂಸ್ಥೆಗಳು ಸ್ವಯಂ ಪ್ರೇರಿತರಾಗಿ ಸರ್ಕಾರಿ ಶಾಲೆಗಳನ್ನು ಉಳಿಸುವ ಅಭಿಯಾನವನ್ನು ಹಾಕಿಕೊಂಡು ವಿದ್ಯಾರ್ಥಿಗಳಿಗೆ ಸ್ಪೋರ್ಟ್ಸ್ ಕಿಟ್ ವಿತರಣೆ ಮಾಡುತ್ತಿರುವುದು ಸಂತೋಷದ ವಿಚಾರವಾಗಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳಿಗೆ ಪಾಠ ಎಷ್ಟು ಮುಖ್ಯವೋ ಆಟವೂ ಕೂಡ ಅಷ್ಟೇ ಮುಖ್ಯವಾಗಿರುತ್ತದೆ ಅದೆಷ್ಟೋ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ ರಾಜ್ಯ,ಅಂತರಾಜ್ಯ ಮಟ್ಟಗಳಲ್ಲಿ ಭಾಗವಹಿಸಿ, ಶಾಲೆಗೆ ಹಾಗೂ ಗ್ರಾಮಗಳಿಗೆ ಗೌರವವನ್ನು ತಂದಿರುವಂತಹ ಉದಾಹರಣೆಗಳು ಅದೆಷ್ಟೋ ಇವೆ,ಅತ್ಯಂತ ಕಿರಿಯ ವಯಸ್ಸಿನಲ್ಲಿ ಕ್ರೀಡಾ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ದೇಶದ ಉನ್ನತ ಹುದ್ದೆಗಳನ್ನು ಅಲಂಕರಿಸುವುದರ ಜೊತೆಗೆ ದೇಶಕ್ಕೆ ಕೀರ್ತಿಯನ್ನು ತಂದು–ಕೊಟ್ಟಿದ್ದಾರೆ ಹಾಗಾಗಿ ನಿಮ್ಮಗೆ ಆಸಕ್ತಿ ಇರುವಂತಹ ಕ್ಷೇತ್ರದಲ್ಲಿ ನೀವು ಗುರುತಿಸಿಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಮಡಿಲು ಸಂಸ್ಥೆಯ ಅಧ್ಯಕ್ಷರಾದ ಕುಮಾರಸ್ವಾಮಿ ಅವರು ಮಾತನಾಡಿ ವಿದ್ಯಾರ್ಥಿಗಳ ಜೀವನದಲ್ಲಿ ಪಾಠಕ್ಕಿಂತ ಆಟಗಳಲ್ಲಿ ಹೆಚ್ಚಿನ ಆಸಕ್ತಿದಾಯಕವಾಗಿರುತ್ತಾರೆ ಆದ್ದರಿಂದ ವಿದ್ಯಾರ್ಥಿಗಳಲ್ಲಿ ಕ್ರೀಡಾ ಚಟುವಟಿಕೆಗಳಲ್ಲಿ ಆಸಕ್ತದಾಯಕ ವಿದ್ಯಾರ್ಥಿಗಳನ್ನು ಗಮನಿಸಿ ಅವರಿಗೆ ತರಬೇತಿಯನ್ನು ನೀಡಿ ಕ್ರೀಡಾಸ್ಪರ್ಧೆಗಳಲ್ಲಿ ಭಾಗವಹಿಸಲು ಸಹಕಾರ ನೀಡಿದ್ದೆ ಆದ–ರೆ ವಿದ್ಯಾರ್ಥಿಗಳು ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಲು ಮುಂದೆ ಬರುತ್ತಾರೆ ಎಂದು ತಿಳಿಸಿದರು.

ಈ ಒಂದು ಸಂದರ್ಭದಲ್ಲಿ ಶಾಲೆಯ ಶಿಕ್ಷಕರಾದ ಶೇಖರಪ್ಪ,ಕುಸುಮ, ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರಾದ ಜಿ ಟಿ ಪ್ರಭು, ಮಡಿಲ ಸಂಸ್ಥೆ ಕಾರ್ಯದರ್ಶಿ ಆನಂದ್, ನಿರ್ದೇಶಕ ಮಹಾಂತೇಶ್, ಸುಮನ್ ಅಭಿಷೇಕ್ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T